# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 72 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 18–09–2023 ಸೋಮವಾರ | ಪುಟ: 4 | ಬೆಲೆ : ರೂ.2–00

Volume - 01 Issue - 72 | Title- Code: KARKAN 28269 | Chitradurga | Date: 18-09-2023 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜಗತ್ತಿನ ಎಲ್ಲಾ ಸೃಷ್ಠಿಗೆ ವಿಶ್ವಕರ್ಮರೆ ಮೂಲ: ಪರಿಷತ್ ಸದಸ್ಯ ಕೆ.ಎಸ್.ನವೀನ್ 2

ಗೌರಸಮುದ್ರ ಜಾತ್ರೆ: ಭಕ್ತರ ಅನುಕೂಲಕ್ಕಾಗಿ ವ್ಯವಸ್ಥೆ ಕೈಗೊಂಡ ತಾಲ್ಲೂಕು ಆಡಳಿತ 3

ಗೌರಿ ಗಣೇಶ ಹಬ್ಬ ಸಂಭ್ರಮದ ಸಾಂಸ್ಕೃತಿಕ ಉತ್ಸವವಾಗಲಿ 4



ಸುದ್ದಿ, ಜಾಹಿರಾತಿಗೆ 9686622252





ಸಮಸ್ತ ನಮ್ಮ ಜನ ಪತ್ರಿಕೆ ಓದುಗರಿಗೆ ಗೌರಿ ಗಣೇಶ ಹಬ್ಬದ ಶುಭಾಷಯಗಳು

» ಸಂಪಾದಕ


### ಸಮಾಜದ ಸರ್ವಜನಾಂಗದರೊಡನೆ ಗೌರವ, ವಿಶ್ವಾಸದಿಂದ ಬದುಕನ್ನು ಹಂಚಿಕೊಂಡ

# ನಾಯಕ ಸಮುದಾಯ ಎಲ್ಲರಿಗೂ ಮಾದರಿ: ಶಾಸಕ ಗೋಪಾಲಕೃಷ್ಣ





» **ಚಳ್ಳಕೆರೆ**

ರಾಜಕೀಯ, ಶೈಕ್ಷಣಿಕ ಹಾಗೂ ಅಭಿವೃದ್ಧಿ ಕ್ಷೇತ್ರದಲ್ಲಿ ಸಮುದಾಯವನ್ನು ಗುರುತಿಸುವಂತೆ ಮಾಡಿದ್ದು ಈ ಕ್ಷೇತ್ರದ ಮಹಾನ್ ವ್ಯಕ್ತಿ, ಶಕ್ತಿಯಾದ ದಿವಂಗತ ಮಾಜಿ ಸಚಿವ ತಿಪ್ಪೇಸ್ವಾಮಿಯವರು ಎಂದು ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು.

ಅವರು, ಭಾನುವಾರ ನಗರದ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಶ್ರೀವಾಲ್ಮೀಕಿ ಸಿರಿ–2023ರ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ, ನಿವೃತ್ತ ನೌಕರರಿಗೆ ಸನ್ಮಾನ ಹಾಗೂ ನೂತನ ಶಾಸಕ ಸಚಿವರಿಗೆ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಪ್ರತಿಭಾಪುರಸ್ಕಾರದಂತಹ ಕಾರ್ಯಗಳು ವಿದ್ಯಾರ್ಥಿಗಳಿಗೆ ಹೆಚ್ಚು ಶಕ್ತಿ ನೀಡುತ್ತದೆಯಲ್ಲದೆ,ಸಾಧನೆಮಾಡುವಂತಹ ಛಲವನ್ನು ಹುಟ್ಟುಹಾಕುತ್ತದೆ. ಇಂದು ಸುಮಾರು 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರತಿಭಾಪುರಸ್ಕಾರಕ್ಕೆ ಅರ್ಹರಾಗಿದ್ದಾರೆ. ಮುಂಬರುವ ದಿನಗಳಲ್ಲಿ ಈ ಸಂಖ್ಯೆ ಸಾವಿರಕ್ಕೆ ಮುಟ್ಟಬೇಕು ಎಂದರು.

ಮಹರ್ಷಿ ವಾಲ್ಮೀಕಿಯವರ ಭಾವಚಿತ್ರವನ್ನು ಅನಾವರಣಗೊಳಿಸಿ ಮಾತನಾಡಿದ ನಾಯಕ ವಿದ್ಯಾರ್ಥಿನಿಯಲ ಮತ್ತು ವಾಲ್ಮೀಕಿ ಟ್ರಸ್ಟ್ ಅಧ್ಯಕ್ಷ ಎಚ್.ಎಂ.ಮಲ್ಲಪ್ಪನಾಯಕ, ನಮ್ಮ ಸಮುದಾಯ ಇಂದು ಉತ್ತಮ ಮಟ್ಟಕ್ಕೆ ತಲುಪಲು ಸಮುದಾಯದ ಪೂರ್ವಿಕರ ಸಾಧನೆಯೇ ನಮಗೆ ರಕ್ಷಣೆಯಾಗಿದೆ. ಇಂದು ಸಮುದಾಯದ 400ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ನಮ್ಮ ಸಂಘದ ವತಿಯಿಂದ ವಿದ್ಯಾರ್ಥಿವೇತನ ನೀಡಿ, ಅವರ ವಿದ್ಯಾರ್ಥಿ ಜೀವನ ಇನ್ನೂ ಉನ್ನತ ಮಟ್ಟತಲುಪಲಿ ಎಂದು ಶುಭಹಾರೈಸುತ್ತೇವೆ. ಇದಕ್ಕೆ ಸಹಕರಿಸಿದ ಟ್ರಸ್ಟ್ ಎಲ್ಲಾ ಸದಸ್ಯರು ಹಾಗೂ ಮುಖಂಡರನ್ನು ಸಮಾಜದ ಪರವಾಗಿ ಅಭಿನಂದಿಸುತ್ತೇನೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ನಾಯಕ ಸಮುದಾಯ ನಿರೀಕ್ಷೆಗೂ ಮೀರಿದ ಬದಲಾವಣೆಯಾಗಿವೆ. ಸಾಮಾಜಿಕ ಕಾರ್ಯಗಳಲ್ಲಿ ನಾವು ಸಹ ಎಲ್ಲರಂತೆ ಉತ್ತಮ ದೃಢಹೆಜ್ಜೆ ಇಟ್ಟಿದ್ದೇವೆ. ಸಮುದಾಯದ ವಿದ್ಯಾರ್ಥಿಗಳಿಗೆ ಸ್ಪೂರ್ತಿ ತುಂಬಲು, ನಿವೃತ್ತ ನೌಕರರ ಜೀವನ ಸುಖಕರವಾಗಿರಲಿ ಎಂದು ಹಾರೈಸಲು ಹಾಗೂ ಆಯ್ಕೆಯಾದ ಜನಪ್ರತಿನಿಧಿಗಳನ್ನು ಸನ್ಮಾಸಲು ಈ ಕಾರ್ಯಕ್ರಮ ಆಯೋಜಿಸಿದೆ ಮುಂಬರುವ ದಿನಗಳಲ್ಲೂ ಸಹ ಸಮಾಜ ಕೈಗೊಳ್ಳುವ ಎಲ್ಲಾ ಕಾರ್ಯಗಳಿಗೂ ನಾನು ಬೆಂಬಲವಾಗಿ ನಿಲ್ಲುತ್ತೇನೆ. ನಿಮ್ಮೆಲ್ಲರ ಪ್ರೀತಿ, ವಿಶ್ವಾಸ, ಗೌರವ ನನಗೆ ಶಕ್ತಿ ತುಂಬಿದೆ ಎಂದರು.

ಇದೆಸಂದರ್ಭದಲ್ಲಿವೈದ್ಯಕೀಯಕ್ಷೇತ್ರದಲ್ಲಿ ಗಣನೀಯಸೇವೆ ಮಾಡಿದ ಡಾ.ಶ್ರೀಲಕ್ಷ್ಮಿ, ಡಾ.ಶ್ರೀನಿಧಿನಾಯಕ, ಜೆಇಇನಲ್ಲಿ 41ನೇ ರ್‍ಯಾಂಕ್ ಪಡೆದ ಎಂ.ಆರ್ಯ, ಐಎಟಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ತಾಲ್ಲೂಕಿನ ಏಕೈಕ ವಿದ್ಯಾರ್ಥಿನಿ ತಳುಕಿನ ಟಿ.ಮೌನಿಕ, ನೀಟ್ ಪರೀಕ್ಷೆಯಲ್ಲಿ 11 ರ್‍ಯಾಂಕ್ ಪಡೆದ ಡಾ.ಮೇಘನಾಶ್ರೀ ಹಾಗೂ ಪದವಿ, ಪಿಯುಸಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಟ್ರಸ್ಟ್ ಕಾರ್ಯದರ್ಶಿ ದುಗ್ಗಾವರತಿಪ್ಪೇಸ್ವಾಮಿ, ಕೆ.ರಂಗಸ್ವಾಮಿ, ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಕಾರ್ಯದರ್ಶಿ ಸಿ.ಗುರುಸ್ವಾಮಿ, ಮಹಿಳಾ ಘಟಕದ ಅಧ್ಯಕ್ಷೆ ಯಶೋಧಮ್ಮ, ಕಾರ್ಯದರ್ಶಿ ಎಚ್.ಎಂ.ಸೂರ್ಯಪ್ರಭ, ಜೆ.ರಘುವೀರನಾಯಕ, ಆರ್.ಪಾಪಣ್ಣ, ಕೆ.ವಿ.ಪ್ರಭಾಕರ್, ನಗರಸಭಾ ಸದಸ್ಯರಾದ ಎಸ್.ಜಯಣ್ಣ, ಟಿ.ಶಿವಕುಮಾರ್, ಸುಮಾ, ಸುಜಾತ, ಕವಿತನಾಯಕಿ, ವಿರೂಪಾಕ್ಷಿ, ಸಿ.ಟಿ.ಶ್ರೀನಿವಾಸ್, ಕೆ.ಪಿ.ಭೂತಯ್ಯ, ಜಯಪಾಲ್, ಬಾಳೆಮಂಡಿರಾಮದಾಸ್, ಬಿಇಒ ಕೆ.ಎಸ್.ಸುರೇಶ್, ಡಿವೈಎಸ್ಪಿ ಟಿ.ಬಿ.ರಾಜಣ್ಣ, ಎನ್.ಎಸ್.ರಾಜು, ರಾಜ್ಯ ಸರ್ಕಾರಿ ನೌಕರರ ಸಂಘದ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್,ನಾಗರಾಜು, ಸಣ್ಣಸೂರಮ್ಮ, ರಾಜಣ್ಣ, ಸುರೇಶ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಅಕ್ಟೋಬರ್ 1 ರಂದು ರಾಜ್ಯ ಸರ್ಕಾರಿ ನೌಕರರ ವಿಶೇಷ ಮಹಾಸಭೆ

» **ಚಿತ್ರದುರ್ಗ**



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು ಇದರ 2022ರ ಉಪವಿಧಿಗಳನ್ನು ತಿದ್ದುಪಡಿ ನೌಕರರ ಇದರ ತಿದ್ದುಪಡಿ ಮಾಡಲು ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್. ಷಡಾಕ್ಷರಿ ಇವರ ಅಧ್ಯಕ್ಷತೆಯಲ್ಲಿ ವರ್ಚುವಲ್ ವಿಧಾನದ ಮೂಲಕ ಸರ್ವ ಸದಸ್ಯರ ವಿಶೇಷ ಮಹಾಸಭೆಯನ್ನು ಆಯೋಜಿಸಲಾಗಿದೆ. ಅಕ್ಟೋಬರ್ 1 ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ಜಿಲ್ಲೆಯ ಹಿರೇಸಿಂದೋಗಿ ರಸ್ತೆಯಲ್ಲಿರುವ ಮಹಾವೀರ ಸಮುದಾಯ ಭವನದಲ್ಲಿ ಸಭೆಯನ್ನು ಏರ್ಪಡಿಸಿದ್ದು, ಸಂಘದ ಸರ್ವ ಸದಸ್ಯರು ಭಾಗವಹಿಸಲು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಚಿತ್ರದುರ್ಗ ಜಿಲ್ಲಾಧ್ಯಕ್ಷ ಕೆ.ಟಿ.ತಿಮ್ಮಾರೆಡ್ಡಿ ತಿಳಿಸಿದ್ದಾರೆ.

### ಡಿಇಎಲ್‌ಇಡಿ ದಾಖಲಾತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಥಮ ವರ್ಷದ ಡಿಇಎಲ್‌ಇಡಿ. ದಾಖಲಾತಿ ಪಡೆಯಲು ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು ಇವರು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 27 ಕೊನೆಯ ದಿನವಾಗಿರುತ್ತದೆ. ಅರ್ಜಿಯನ್ನು ವೆಬ್‌ಸೈಟ್ ತಿತಿತಿ.ಛಿಠಿಠಟಜಜಣಥಿಚಿಣಜಠಟ.ಞಚಿಡ.ಟಿಛಿ.ಟ ನಲ್ಲಿ ಡೌನ್‌ಲೋನ್ ಮಾಡಿಕೊಂಡು ನಿಗದಿತ ದಾಖಲೆಗಳು ಮತ್ತು ಡಿ.ಡಿ.ಯೊಂದಿಗೆ ನೋಡಲ್ ಕೇಂದ್ರವಾದ ಡಯಟ್, ದಾವಣಗೆರೆ ಇಲ್ಲಿ ನಿಗದಿತ ದಿನಾಂಕದೊಳಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಮೇಲಿನ ವೆಬ್‌ಸೈಟ್ ಅಥವಾ ದೂ.ಸಂ: 9164489972, 8867932439, 9844401092, 08192 231156, ಸಂಪರ್ಕಿಸಲು ಡಯಟ್ ಪ್ರಾಚಾರ್ಯರಾದ ಗೀತ ತಿಳಿಸಿದ್ದಾರೆ.



ಚಳ್ಳಕೆರೆ ನಗರದ ಚಿತ್ರದುರ್ಗ ರಸ್ತೆಯಲ್ಲಿ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಗಣೇಶ ಮೂರ್ತಿಗಳು ಬಂದಿಳಿದಿರುವುದು.

## ವಿಶ್ವಮಾನವ ಶಾಲೆಯಲ್ಲಿ ಕಲೋತ್ಸವ

» **ಚಿತ್ರದುರ್ಗ**



ವಿಶ್ವಮಾನವ ಸಾಂಸ್ಕೃತಿಕ ಮತ್ತು ವಿದ್ಯಾಸಂಸ್ಥೆ (ರಿ,) ಸೀಬಾರ–ಗುತ್ತಿನಾಡು.
ಸಂಸ್ಥೆಯ ರಜತ ಮಹೋತ್ಸವದ ಅಂಗವಾಗಿ ಜಿಲ್ಲಾ ಮಟ್ಟದ ಕಲೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧಡೆಗಳಿಂದ ಸುಮಾರು 50 ಕ್ಕೂ ಹೆಚ್ಚು ಶಾಲಾ – ಕಾಲೇಜುಗಳಿಂದ ವಿದ್ಯಾರ್ಥಿಗಳು ಆಗಮಿಸಿ ಸಂಭ್ರಮದಿಂದ ಪಾಲ್ಗೊಂಡರು. ಈ ಒಂದು ಕಲೋತ್ಸವದಲ್ಲಿ ಆಶುಭಾಷಣ ಸ್ಪರ್ಧೆ, ಜನಪದ ಗೀತೆ ಸ್ಪರ್ಧೆ, ವಚನ ಗೀತೆ ಸ್ಪರ್ಧೆ, ಚಿತ್ರಕಲೆ ಹಾಗೂ ಮಿಮಿಕ್ರಿ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು.ಈ ಲಪಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಗಳಿಸಿದಂತಹ ವಿದ್ಯಾರ್ಥಿಗಳಿಗೆ ನಗದು ಬಹುಮಾನ


ಪುಟ 2


## ಪ್ರಮುಖ ಸುದ್ದಿ

# ಗೌರಸಮುದ್ರ ಗ್ರಾಮದಲ್ಲಿ ಗಣೇಶನ ಹಬ್ಬ ಆಚರಿಸಲ್ಲ

» **ಚಳ್ಳಕೆರೆ**

ನಾಡಿನಾದ್ಯಂತ ಗಣೇಶ ಹಬ್ಬ ಆಚರಣೆ ಸಿದ್ದತೆ ನಡೆಸುತ್ತಿದ್ದರೆ, ಈ ಗ್ರಾಮದಲ್ಲಿ ಮಾತ್ರ ವಿಘ್ನನಿವಾರಕ ಗಣೇಶ ಚತುರ್ಥಿಯನ್ನೇ ಆಚರಿಸುವುದೆ ಇಲ್ಲ.

ತಾಲ್ಲೂಕಿನ ಗಡಿನಾಡು ಆಂಧ್ರಪ್ರದೇಶಕ್ಕೆ ಹೊಂದಿಕೊಂಡಿರುವ ಗೌರಸಮುದ್ರ ಗ್ರಾಮದಲ್ಲಿ ಕಳೆದ ಹಲವಾರು ವರ್ಷಗಳಿಂದ ಗಣೇಶ ಚತುರ್ಥಿಯನ್ನೇ ಆಚರಿಸಲ್ಲ, ಸುತ್ತಮುತ್ತಲ ಗ್ರಾಮ, ನಗರದಲ್ಲಿ ಗಲ್ಲಿಗಲ್ಲಿಯಲ್ಲಿ ಪ್ರತಿಷ್ಠಾನೆಯಾಗುವ ಗಣೇಶ ಈ ಗ್ರಾಮದಲ್ಲಿ ಪ್ರವೇಶವನ್ನೆ ಮಾಡಲ್ಲ. ಕಳೆದ ಹತ್ತಾರು ವರ್ಷಗಳಿಂದ ನಮ್ಮ ಗ್ರಾಮದೇವತೆ, ಜಿಲ್ಲೆಯ ಪ್ರತಿಷ್ಠಿತ ಜಾತ್ರೆಗಳಲ್ಲಿ ಒಂದಾದ ಗೌರಸಮುದ್ರ ಮಾರಮ್ಮ ಮತ್ತು ಗಣೇಶ ಚತುರ್ಥಿ ಎರಡೂ ಹಬ್ಬಗಳು ಭಾದ್ರಪದ ಮಾಸದ ಸೋಮವಾರ ಗಣೇಶ ಹಬ್ಬವಾದರೆ, ಮರು ದಿನ(ಮಂಗಳವಾರ) ಮಾರಮ್ಮದೇವಿ ಜಾತ್ರೆ ನಡೆಯುತ್ತದೆ. ಆದಕಾರಣ ನಮ್ಮ ಗ್ರಾಮದಲ್ಲಿ ಗಣೇಶನ ಎಂಟ್ರಿ ಇಲ್ಲ ಎನ್ನುತ್ತಾರೆ ಗ್ರಾಮ ಪಂಚಾಯತಿ ಅಧ್ಯಕ್ಷ ಓಬಣ್ಣ.



ಚಳ್ಳಕೆರೆ ತಾಲ್ಲೂಕಿನ ಗೌರಸಮುದ್ರ ಗ್ರಾಮದ ದೃಶ್ಯ.

ಈ ಭಾಗದ ಆರಾಧ್ಯ ದೈವ, ಶಕ್ತಿ ದೇವತೆ, ಮಧ್ಯಾಹ್ನ ಮಾರಿ ಎಂದೆ ಕರೆಸಿಕೊಳ್ಳುವ ಗೌರಸಮುದ್ರ ಮಾರಮ್ಮಜಾತ್ರೆಗೆ ನಾಡಿನ ಮೂಲೆ ಮೂಲೆಗಳಿಂದ ಸಾವಿರಾರು ಭಕ್ತರು ಆಗಮಿಸುತ್ತಾರೆ. ಈ ಸಂದರ್ಭದಲ್ಲಿ ಗಣೇಶ ಪ್ರತಿಷ್ಠಾಪನೆ ಸಾಧ್ಯವಾಗದು ಎಂಬ ವಾದ ಒಂದು ಕಡೆಯಾದರೆ ಮತ್ತೊಂದು ವಾದದಲ್ಲಿ ಗಣೇಶ ಪ್ರತಿಷ್ಠಾನೆ ಮಾಡಿದವರು ನೂರಾರು ಸಂಕಟಗಳನ್ನು ಅನುಭವಿಸುತ್ತಾರೆ ಎಂಬ ನಂಬಿಕೆಯೂ ಈ ಗ್ರಾಮದಲ್ಲಿದೆ. ವಿಘ್ನವಿನಾರಕ ಎಂಬ ಉದ್ದೇಶದಿಂದ ಪ್ರತಿ ಮನೆ, ಗಲ್ಲಿಯಲ್ಲಿ ಕುಳಿತು ಜನರ ಕಷ್ಟನಿವಾರಣೆ ಮಾಡುವ ವಿನಾಯಕ ಈ ಗ್ರಾಮವನ್ನು ಮಾತ್ರ ಹಲವಾರು ವರ್ಷಗಳಿಂದ ಪ್ರವೇಶಿಸಿಯೇ ಇಲ್ಲ.

ಈ ವರ್ಷ ಮಳೆ ಕಡಿಮೆಯಾಗಿದ್ದರೂ ಗಣೇಶನ ಹಬ್ಬದ ಆಚರಣೆಗೆ ಎಲ್ಲೆಡೆ ಉತ್ಸಾಹ ತುಂಬಿದೆ. ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ವಿಶ್ವಹಿಂದೂಪರಿಷತ್ ಮತ್ತು ಭಜರಂಗದಳ ಸಂಘಟನೆ, ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಓಂಕಾರ ಗಣಪತಿ ಸಂಘದವರು ಗಣೇಶನ ಹಬ್ಬವನ್ನು ಭರ್ಜರಿಯಾಗಿ ಆಚರಿಸಲು ಪೆಂಡಾಲ್‌ಗಳನ್ನು ನಿರ್ಮಿಸಿದ್ದು ಪೆಂಡಲ್ ಸುತ್ತಮುತ್ತ ವಿವಿಧ ಮನೋರಂಜನೆಯ ಆಟಗಳ ಸಾಮಾಗ್ರಿಗಳು ಬಂದಿಳಿದಿವೆ.

ನಗರದ ಎಲ್ಲಾ ರಸ್ತೆಗಳಲ್ಲೂ ಸುಮಾರು 60ಕ್ಕೂ ಹೆಚ್ಚು ಗಣೇಶನ ವಿಗ್ರಹದ ಮಾರಾಟಗಾರರು ನೂರಾರು ಸಂಖ್ಯೆಯಲ್ಲಿ ಸಿದ್ದಪಡಿಸಿ ಗಣೇಶನ ಮೂರ್ತಿಯನ್ನು ತಂದಿಟ್ಟಿದ್ದಾರೆ. ಜನರು ಉತ್ಸಾಹದಿಂದ ಮೂರ್ತಿಯನ್ನು ವೀಕ್ಷಿಸುತ್ತಿದ್ದಾರೆ. ಆದರೆ, ಈ ಬಾರಿ ಗಣೇಶ ದರ ಭಕ್ತರನ್ನು ದಂಗುಬಡಿಸುತ್ತಿದೆ. ಚಿಕ್ಕ, ಚಿಕ್ಕ ಮೂರ್ತಿಗಳು ಸಹ 400ರಿಂದ500ರೂ, ದೊಡ್ಡ ಗಣೇಶನಿಗೆ 3ರಿಂದ5 ಸಾವಿರ ದರವನ್ನು ಮಾರಾಟಗಾರರು ನಿಗದಿಪಡಿಸಿದ್ದಾರೆ. ಆದರೆ, ಗಣೇಶನನ್ನು ಕೊಳ್ಳಲು ಬಂದ ಬಹುತೇಕ ಜನ ಮಳೆ, ಬೆಳೆ ಇಲ್ಲದೆ ಕಂಗಾಲಾಗಿರುವ ಭಕ್ತರಿಗೆ ಗಣೇಶಮೂರ್ತಿಯ ದರ ಹೆಚ್ಚು ನೋವು ಪಡುವಂತೆ ಮಾಡಿದೆ. ಆದರೂ ವಿಘ್ನನಿವಾರಕ ಶ್ರೀಗಣೇಶನನ್ನು ಪೂಜಿಸಬೇಕಿದೆ.





## ಫಾಸ್ಟ್ ನ್ಯೂಸ್

### ವಿಶ್ವಮಾನವ ಶಾಲೆಯಲ್ಲಿ ಕಲೋತ್ಸವ

» ಮೊದಲ ಪುಟದಿಂದ

ಪ್ರಶಸ್ತಿ ಪತ್ರ ಹಾಗೂ ಪಾರಿತೋಷಕವನ್ನು ನೀಡಿ ಅಭಿನಂದಿಸಲಾಯಿತು. ಅದೇ ರೀತಿಯಾಗಿ ಜಿಲ್ಲೆಯ ವಿವಿಧ ಶಿಕ್ಷಕರುಗಳನ್ನು ತೀರ್ಪುಗಾರರನ್ನಾಗಿ ನೇಮಕ ಮಾಡಿ ವಸ್ತುನಿಷ್ಠವಾಗಿ ಫಲಿತಾಂಶವನ್ನು ಪ್ರಕಟಿಸಲಾಯಿತು. ಸದರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರಾದ ಶ್ರೀ.ಬಿ.ಜಿ.ಶಿವರುದ್ರಯ್ಯನವರು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಆಗಮಿಸಿದಂತ ಶ್ರೀ ತಿಮ್ಮರಾಜು. ಎಂ. ಎಲ್. ಸಮೂಹ ಸಂಪನ್ಮೂಲ ವ್ಯಕ್ತಿಗಳು ಎಂ. ಕೆ. ಹಟ್ಟಿ ಕ್ಲಸ್ಟರ್, ಚಿತ್ರದುರ್ಗ ಇವರು ತಮ್ಮ ನುಡಿಗಳಲ್ಲಿ ಕಲೋತ್ಸವ ಕಾರ್ಯಕ್ರಮದ ಪ್ರಾಮುಖ್ಯತೆ ಹಾಗೂ ಪ್ರತಿಯೊಂದು ಶಾಲೆಯಲ್ಲಿಯೂ ಈ ರೀತಿ ಚಟುವಟಿಕೆಗಳನ್ನು ಮಕ್ಕಳಿಗೆ ಮಾಡಿಸುತ್ತಾ ಹೋದರೆ ಮಕ್ಕಳಲ್ಲಿರುವ ಅಡಗಿರುವ ಪ್ರತಿಭೆಯನ್ನು ಹೊರ ತರಲು ವೇದಿಕೆ ಸೃಷ್ಟಿಸಿದಂತಾಗುತ್ತದೆ ಎಂದು ತಿಳಿಸಿದರು. ಹಾಗೆಯೇ ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಶ್ರೀ ಬಸವರಾಜಪ್ಪ, ನಿವೃತ್ತ ಡಿ.ವೈ. ಎಸ್.ಪಿ, ಚಿತ್ರದುರ್ಗ, ಶ್ರೀ ಗ. ರಾ. ಸುರೇಶ್, ಸಾಮಾಜಿಕ ಕಾರ್ಯಕರ್ತರು, ಬೆಂಗಳೂರು, ಶ್ರೀ ಮಲ್ಲಿಕಾರ್ಜುನ್ ಎ. ಮುಖ್ಯೋಪಾಧ್ಯಾಯರು, ಕುವೆಂಪು ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಗುತ್ತಿನಾಡು, ಶ್ರೀ ಜಂಬೂನಾಥ್, ನಿವೃತ್ತ ಶಿಕ್ಷಕರು ಚಿತ್ರದುರ್ಗ, ಶ್ರೀ ವೆಂಕಟಸ್ವಾಮಿ, ನಿವೃತ್ತ ಶಿಕ್ಷಕರು ಚಿತ್ರದುರ್ಗ, ಶ್ರೀ ಜಿ. ಆರ್. ಚನ್ನಬಸಪ್ಪ ಮುಖ್ಯೋಪಾಧ್ಯಾಯರು, ವಿಶ್ವಮಾನವ ವಸತಿ ಶಾಲೆ, ಶ್ರೀಮತಿ ಹೆಚ್.ಆರ್.ಸುಧಾ, ಪ್ರಾಂಶುಪಾಲರು, ವಿಶ್ವ ಮಾನವ ಸಂಯುಕ್ತ ಪದವಿ ಪೂರ್ವ ಕಾಲೇಜು . ಇವರುಗಳು ಈ ಕಾರ್ಯಕ್ರಮದಲ್ಲಿ ಹಾಜರಿದ್ದರು.

### ಸಹಕಾರ ಕ್ಷೇತ್ರದ ಚರ್ಚಾ ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆಯಾದ ಬಿ.ಸೌಂದರ್ಯ.



» ಚಳ್ಳಕೆರೆ

ಸಹಕಾರ ಕ್ಷೇತ್ರದ ಕಾರ್ಯಚಟುವಟಿಕೆ ಕುರಿತು ಜಿಲ್ಲಾ ಮಟ್ಟದ ಚರ್ಚಾ ಸ್ಪರ್ಧೆಯಲ್ಲಿ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಥಮ ಪಿಯುಸಿ ವಿದ್ಯಾರ್ಥಿನಿ ಬಿ.ಸೌಂದರ್ಯ(ವಿಜ್ಞಾನ ವಿಭಾಗ) ಪ್ರಥಮ ಸ್ಥಾನಗಳಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ಸಹಯೋಗದೊಂದಿಗೆ ಚಿತ್ರದುರ್ಗದ ಮಹರಾಣಿ ಪದವಿಪೂರ್ವ ಕಾಲೇಜಿನಲ್ಲಿ ಚರ್ಚಾಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು. ರಾಜ್ಯಮಟ್ಟಕ್ಕೆ ಆಯ್ಕೆಯಾದ ಬಿ.ಸೌಂದರ್ಯರವರನ್ನು ಕಾಲೇಜು ಪ್ರಾಂಶುಪಾಲ ಎಂ.ರವೀಶ್‌ಕುಮಾರ್, ಉಪನ್ಯಾಸಕ ಬೆಳಗಟ್ಟ ನಾಗರಾಜು, ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ವಸಂತಕುಮಾರ್, ನಿವೃತ್ತ ಪ್ರಾಂಶುಪಾಲ ಎಸ್.ಲಕ್ಷ್ಮಣ್ ಅಭಿನಂದಿಸಿದ್ದಾರೆ.

### ಪೋಷಕರ ಸಹಕಾರದಿಂದ ಬಸವೇಶ್ವರ ಶಾಲೆ ಉತ್ತಮ ಪ್ರಗತಿಯತ್ತ



» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ನಗರದಲ್ಲಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುತ್ತಾ ಬಂದಿರುವ ಶ್ರೀಬಸವೇಶ್ವರ ಆಂಗ್ಲಮಾಧ್ಯಮಿಕ ಶಾಲೆ ಮುಂಬರುವ ದಿನಗಳಲ್ಲೂ ಸಹ ವಿದ್ಯಾರ್ಥಿಗಳಿಗೆ ತಾಂತ್ರಿಕೆಯಿಂದ ಕೂಡಿದ ಶಿಕ್ಷಣ ನೀಡಲು ಸಿದ್ದವಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಕೋಟೆ ಜಯಣ್ಣ ತಿಳಿಸಿದರು. ಅವರು, ಶಾಲೆಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪೋಷಕರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ವಿದ್ಯಾಸಂಸ್ಥೆ ಪೋಷಕರ ಸಹಕಾರದಿಂದ ಉತ್ತಮವಾಗಿ ನಡೆದಿದೆ. ಪ್ರತಿವರ್ಷವೂ ಎಲ್ಲಾ ಶಾಲೆಗಳ ಫಲಿತಾಂಶ ಉತ್ತಮವಾಗಿರುತ್ತದೆ. ನಿಮ್ಮೆಲ್ಲರ ಸಹಕಾರ ನಮಗೆ ಶಕ್ತಿ ತುಂಬಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ವಿ.ಮಂಜುನಾಥ ವಹಿಸಿ ಮಾತನಾಡಿ, ಆಡಳಿತ ಮಂಡಳಿ ಮತ್ತು ಶಿಕ್ಷಕ ವರ್ಗ ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಶಿಕ್ಷಣ ನೀಡಲಾಗುತ್ತಿದೆ. ಪೋಷಕರಿಗೂ ಸಹ ಹೆಚ್ಚಿನ ಶುಲ್ಕವಿಧಿಸದೆ ಕಡಿಮೆ ವೆಚ್ಚದಲ್ಲೇ ಉತ್ತಮ ಶಿಕ್ಷಣ ನೀಡುವ ವ್ಯವಸ್ಥೆ ನಮ್ಮಲ್ಲಿದೆ ಎಂದರು. ಸಭೆಯಲ್ಲಿ ನಿರ್ದೇಶಕರಾದ ಅನ್ನಪೂರ್ವಪ್ರಕಾಶ್, ಎಸ್.ಬಸವರಾಜು, ರಮೇಶ್, ಮುಖ್ಯ ಶಿಕ್ಷಕಿ ಮಧುರ, ಶಿಕ್ಷಕ ಬಸವರಾಜು, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

# ಜಗತ್ತಿನ ಎಲ್ಲಾ ಸೃಷ್ಟಿಗೆ ವಿಶ್ವಕರ್ಮರೆ ಮೂಲ

## ವಿಶ್ವಕರ್ಮ ಜಯಂತಿ ಆಚರಣೆ ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್

» ಚಿತ್ರದುರ್ಗ



ಕಣ್ಣಿಗೆ ಕಾಣುವಂತಹ ಪ್ರತಿಯೊಂದು ಆಕೃತಿಯನ್ನೂ ನಿರ್ಮಾಣ ಮಾಡಿರುವಂತಹ ಶ್ರೇಯಸ್ಸು ಹಾಗೂ ಕೀರ್ತಿ ವಿಶ್ವಕರ್ಮರಿಗೆ ಸಲ್ಲುತ್ತದೆ. ಇಡೀ ಜಗತ್ತು ವಿಶ್ವಕರ್ಮರಿಂದ ನಿರ್ಮಾಣವಾಗಿದೆ. ಜಗತ್ತಿನ ಎಲ್ಲಾ ಸೃಷ್ಟಿಗೆ ವಿಶ್ವಕರ್ಮರೆ ಮೂಲ ಎಂದು ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಭಾನುವಾರ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವಕರ್ಮ ಜಯಂತಿ ಆಚರಣೆ ಸಮಾರಂಭದಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ದೇಶದ ಯಾವುದೇ ಭಾಗದಲ್ಲಿನ ಕೆತ್ತನೆ ಕಾರ್ಯ ಅದು ವಿಶ್ವಕರ್ಮರ ಕೈಯಿಂದ ಮೂಡಿಬಂದಿವೆ. ವಿಶ್ವಕರ್ಮ ಸಮುದಾಯ ಇಲ್ಲದೇ ಯಾವುದೇ ಬದುಕು ನಡೆಯುವುದಿಲ್ಲ. ವಿಶ್ವಕರ್ಮ ಸಮುದಾಯದ, ಬೆಂಬಲ, ಕರಕುಶತೆ, ಪಾಲುಗಾರಿಕೆ ಇಲ್ಲದೆ, ರೈತ, ಉದ್ಯಮಿ ಸೇರಿದಂತೆ ಯಾವ ಮನುಷ್ಯರ ಬದುಕು ನಡೆಯುವುದಿಲ್ಲ. ಭಾರತೀಯ ಕಲೆ, ಸಂಸ್ಕೃತಿಯನ್ನು ಉಳಿಸಿ, ಬೆಳೆಸುವ ಜವಾಬ್ದಾರಿ ವಿಶ್ವಕರ್ಮರ ಮೇಲಿದೆ ಎಂದರು. ದೇಶದ ಪ್ರಧಾನಿ ನರೇಂದ್ರ ಮೋದಿಯವರು ವಿಶ್ವಕರ್ಮರ ಸಂಪೂರ್ಣ ಉನ್ನತಿಗಾಗಿ ಇಂದು ಹೊಸ ಕಾರ್ಯಕ್ರಮ ಘೋಷಣೆ ಮಾಡಿದ್ದಾರೆ. ವಿಶ್ವಕರ್ಮರಿಗೆ ಎಲ್ಲ ತರಹದ ಸೌಲಭ್ಯ ಕೊಡುವಂತಹ ಕೌಶಲ ತರಬೇತಿ, ಉದ್ಯಮ ಪ್ರಾರಂಭಕ್ಕೆ ಬೇಕಾದ ಸಾಲಸೌಲಭ್ಯ ಸೇರಿದಂತೆ ಸಾಂಪ್ರಾದಾಯಿಕ ವೃತ್ತಿಗಳನ್ನು ಉಳಿಸಿ, ಬೆಳೆಸಲು ವಿಶ್ವಕರ್ಮರಿಗಾಗಿ ಯೋಜನೆ ರೂಪಿಸಿದ್ದಾರೆ ಎಂದರು.

ಅಪರಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ವಿಶ್ವಕರ್ಮ ಸಮಾಜ ಶ್ರಮ ಮತ್ತು ಕೌಶಲ್ಯ ಎರಡಕ್ಕೂ ಪಾತ್ರರಾಗಿದ್ದಾರೆ. ದೇಶದ ಸಂಸ್ಕೃತಿ ಮತ್ತು ವಾಸ್ತುಶಿಲ್ಪಕ್ಕೆ ವಿಶ್ವಕರ್ಮ ಸಮಾಜದ ಕೊಡುಗೆ ಅಪಾರವಾಗಿದೆ. ಪ್ರತಿಯೊಂದು ಕಾರ್ಯಕ್ಕೂ ವಿಶ್ವಕರ್ಮರು ಬೇಕೆ ಬೇಕು. ವಿಶ್ವಕರ್ಮರಿಲ್ಲದೇ ಯಾವುದೇ ಕಾರ್ಯ ನಡೆಯವುದಿಲ್ಲ. ರೈತರು ದೇಶದ ಬೆನ್ನೆಲುಬುದರೆ ರೈತರಿಗೆ ವಿಶ್ವಕರ್ಮ ಸಮಾಜವೇ ಬೆನ್ನೆಲುಬು ಎಂದರು.

ಬದಲಾದ ಆಧುನಿಕತೆ, ತಂತ್ರಜ್ಞಾನಕ್ಕೆ ತಕ್ಕಂತೆ ವಿಶ್ವಕರ್ಮ ಸಮಾಜ ಪ್ರಸ್ತುತ ಹೊಸ ಬದುಕಿಗೆ ತೆರೆದುಕೊಳ್ಳಬೇಕಿದೆ. ಶಿಲೆಯಲ್ಲಿ ಕಲೆ ಅರಳಿಸುವ ವಿಶ್ವಕರ್ಮ ಸಮುದಾಯದವರ ಕುಲಕಸುಬು ನಶಿಸಬಾರದು ಎಂದು ಕಳಕಳಿ ವ್ಯಕ್ತಪಡಿಸಿದ ಅವರು, ಕಲೆ ಮತ್ತು ಕೌಶಲ್ಯ ವಿಶ್ವಕರ್ಮರಿಗೆ ವರ ಇದ್ದಂತೆ ಎಂದರು.

ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ವಿಜೇತರು, ಸುರಭೀ ಹೊಯ್ಸಳ ಕಲಾನಿಕೇತನ ಕಾರ್ಯದರ್ಶಿಗಳು ಹಾಗೂ ಹೊಯ್ಸಳ ಶಿಲ್ಪಕಲಾ ಕುಟೀರ ಅಧ್ಯಕ್ಷ ಶಿಲ್ಪಿ ಎಸ್. ಮಂಜುನಾಥಚಾರ್ಯ ಉಪನ್ಯಾಸ ನೀಡಿ, ವಿಶ್ವಕರ್ಮ ಇಡೀ ಭೂಮಂಡಲವನ್ನು ಸೃಷ್ಟಿ ಮಾಡಿರುವಂತಹ ಸೃಷ್ಟಿಕರ್ತ. ವಿಶ್ವಕರ್ಮ ಎಂಬ ಒಂದು ದೇವರ ಹೆಸರಲ್ಲ. ಶಕ್ತಿ ಅಲ್ಲ, ವಿಶ್ವ ಅಂದರೆ ಒಂದು ಬ್ರಹ್ಮಾಂಡ. ಕರ್ಮ ಅಂದರೆ ಸೃಷ್ಟಿ. ಬೃಹ್ಮಾಂಡ ಸೃಷ್ಟಿಯ ಹೆಸರು. ಅಖಂಡ ಬ್ರಹ್ಮಾಂಡದಲ್ಲಿ ವಿಶ್ವಕರ್ಮನಿಗೆ ಮಹತ್ವವಾದ ಹೆಸರಿದೆ. ಸೃಷ್ಟಿಯ ಮೂಲ ಪುರುಷ ವಿಶ್ವಕರ್ಮ ಎಂದರು. ವಿಶ್ವಕರ್ಮ ಸಮಾಜದ ಮುಖಂಡ ಪ್ರಸನ್ನಾಚಾರ್, ಶಿಲ್ಪಿ ಸುರೇಶ್ ಮಾತನಾಡಿದರು. ಸಿಂದಗಿ ಆಲಮೇಲ ಶ್ರೀವಿಶ್ವಬ್ರಾಹ್ಮಣ ಮೂರುಝಾವದಮಠ ಹಾಗೂ ಕರ್ನಾಟಕ ರಾಜ್ಯ ವಿಶ್ವಬ್ರಾಹ್ಮಣ ಮಠಾಧಿಪತಿಗಳ ಮತ್ತು ಪೀಠಾಧಿಪತಿಗಳ ಅಭಿವೃದ್ಧಿ ಸಂಘದ ಅಧ್ಯಕ್ಷ ಶ್ರೀ ರಾಮಚಂದ್ರಸ್ವಾಮಿಗಳು ದಿವ್ಯ ಸಾನಿಧ್ಯವಹಿಸುವರು. ಕಾರ್ಯಕ್ರಮದಲ್ಲಿ ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ಕೆ.ಟಿ.ಸುರೇಶಾಚಾರ್, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ಎ. ಶಂಕರಾಚಾರ್, ಉಪಾಧ್ಯಕ್ಷರಾದ ಕೃಷ್ಣಾಚಾರ್, ಮಲ್ಲಿನಾಥಾಚಾರ್, ಬಾಲಬ್ರಹ್ಮಾಚಾರ್, ಕಾರ್ಯದರ್ಶಿ ಕೆ.ಶಿವಣ್ಣಾಚಾರ್, ಪ್ರಧಾನ ಕಾರ್ಯದರ್ಶಿ ಎ.ಗೋವರ್ಧನ, ಮಹಿಳಾ ಘಟಕದ ಅಧ್ಯಕ್ಷೆ ವಿಜಯ ನಾಗೇಂದ್ರಾಚಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ಜಿಲ್ಲೆಯ ವಿಶ್ವಕರ್ಮ ಸಮಾಜದ ಮುಖಂಡರು ಇದ್ದರು. ಚಿತ್ರದುರ್ಗ ಉಮೇಶ ಪತ್ತಾರ ಮತ್ತು ತಂಡದವರಿಂದ ಗೀತಗಾಯನ ನಡೆಸಿಕೊಟ್ಟರು. ವಿಶ್ವಕರ್ಮರ ಭಾವಚಿತ್ರ ಮೆರವಣಿಗೆ : ವಿಶ್ವಕರ್ಮ ಜಯಂತಿ ಅಂಗವಾಗಿ ಚಿತ್ರದುರ್ಗ ನಗರದ ಬುರುಜನಹಟ್ಟಿಯ ಕೋಟೆ ಆಂಜನೇಯ ದೇವಸ್ಥಾನದಿಂದ ವಿಶ್ವಕರ್ಮರ ಭಾವಚಿತ್ರ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಚಾಲನೆ ನೀಡಿದರು. ಮೆರವಣಿಗೆಯಲ್ಲಿ ನಾದಸ್ವರ ಡೊಳ್ಳು ಸೇರಿದಂತೆ ವಿವಿಧ ಜಾನಪದ ಕಲಾತಂಡಗಳು ಭಾಗವಹಿಸಿದ್ದವು. ಕೋಟೆ ಆಂಜನೇಯಸ್ವಾಮಿ ದೇಗುಲದಿಂದ ಆರಂಭವಾದ ಮೆರವಣಿಗೆಯು ನಗರ ಪ್ರಮುಖ ವೃತ್ತಗಳ ಮೂಲಕ ಸಂಚರಿಸಿ, ತರಾಸು ರಂಗ ಮಂದಿರ ತಲುಪಿತು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎಸ್. ಕೆ.ಬಸವರಾಜನ್ ಇದ್ದರು.

---

### ವಿಶ್ವ ರೋಗಿಗಳ ಸುರಕ್ಷತಾ ದಿನದಲ್ಲಿ ಟಿಹೆಚ್‌ಒ ಡಾ.ಬಿ.ವಿ.ಗಿರೀಶ್ ಸಲಹೆ

# ಗುಣಮಟ್ಟದ ಸೇವಾ ಭರವಸೆ ಮೂಲಕ ರೋಗಿಗಳ ಸುರಕ್ಷತೆ ಕಾಪಾಡೋಣ

» ಚಿತ್ರದುರ್ಗ



ಗುಣಮಟ್ಟದ ಸೇವಾ ಭರವಸೆಯ ಮೂಲಕ ರೋಗಿಗಳ ಸುರಕ್ಷತೆ ಕಾಪಾಡೋಣ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲೂಕಿನ ಲಕ್ಷ್ಮೀಸಾಗರ–ವಿಜಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶನಿವಾರ ವಿಶ್ವ ರೋಗಿಗಳ ಸುರಕ್ಷತಾ ದಿನ ಅಂಗವಾಗಿ ಆರೋಗ್ಯ ಸೇವಾ ಸಿಬ್ಬಂದಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿ ಅವರು ಮಾತನಾಡಿದರು. ರಾಷ್ಟ್ರೀಯ ಗುಣಮಟ್ಟದ ಸೇವಾ ಭರವಸೆಯ ಯೋಜನೆ ಅಡಿಯಲ್ಲಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಗುಣಮಟ್ಟದ ಸೇವೆಯನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ. ವಿಶ್ವರೋಗಿಗಳ ಸುರಕ್ಷತಾ ದಿನ 2019 ರಿಂದ ವಿಶ್ವ ಆರೋಗ್ಯ ಸಂಸ್ಥೆಯ ನಿರ್ದೇಶನದಂತೆ ಪ್ರತಿ ವರ್ಷ ಒಂದೊಂದು ಘೋಷವಾಕ್ಯದಂತೆ ಸೆಪ್ಟೆಂಬರ್ 17ರಂದು ವಿಶ್ವಾದ್ಯಂತ ಆಚರಿಸಲಾಗುತ್ತಿದೆ. ರೋಗಿಗಳ ಸುರಕ್ಷತೆಯು ಜಾಗತಿಕ ಆರೋಗ್ಯದ ಆದ್ಯತೆಯಾಗಿದೆ ಎಂದು ಗುರುತಿಸಿ, ವಾರ್ಷಿಕವಾಗಿ ವಿಶ್ವ ರೋಗಿಗಳ ಸುರಕ್ಷತಾ ದಿನವನ್ನು ಸ್ಥಾಪಿಸುವುದನ್ನು ಅನುಮೋದಿಸಿತು. ಸೆಪ್ಟೆಂಬರ್ 17 ರಂದು ಮೊದಲ ವಿಶ್ವ ರೋಗಿಗಳ ದಿನವನ್ನು 2019 ರಲ್ಲಿ ಆಚರಿಸಲಾಯಿತು ಎಂದರು.

ರೋಗಿಗಳ ಸುರಕ್ಷತೆಯು ಆರೋಗ್ಯ ರಕ್ಷಣೆಯ ಶಿಸ್ತಾಗಿದ್ದು, ಇದು ಆರೋಗ್ಯ ರಕ್ಷಣಾ ವ್ಯವಸ್ಥೆಗಳಲ್ಲಿನ ಸಂಕೀರ್ಣತೆ ಮತ್ತು ಆರೋಗ್ಯ ರಕ್ಷಣಾ ಸೌಲಭ್ಯಗಳಲ್ಲಿ ರೋಗಿಗಳ ಹಾನಿಯ ಪರಿಣಾಮವಾಗಿ ಹೊರಹೊಮ್ಮಿತು. ಆರೋಗ್ಯ ರಕ್ಷಣೆಯ ಸಮಯದಲ್ಲಿ ರೋಗಿಗಳಿಗೆ ಸಂಭವಿಸುವ ಅಪಾಯಗಳು, ದೋಷಗಳು ಮತ್ತು ಹಾನಿಯನ್ನು ತಡೆಗಟ್ಟುವುದು ಮತ್ತು ಕಡಿಮೆ ಮಾಡುವುದು ಇದರ ಗುರಿಯಾಗಿದೆ. ದೋಷಗಳು ಮತ್ತು ಪ್ರತಿಕೂಲ ಘಟನೆಗಳಿಂದ ಕಲಿಕೆಯ ಆಧಾರದ ಮೇಲೆ ನಿರಂತರ ಸುಧಾರಣೆ ಶಿಸ್ತಿನ ಮೂಲಾಧಾರವಾಗಿದೆ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್.ಮಂಜುನಾಥ್ ಮಾತನಾಡಿ, ಗುಣಮಟ್ಟದ ಅಗತ್ಯ ಆರೋಗ್ಯ ಸೇವೆಗಳನ್ನು ತಲುಪಿಸಲು ರೋಗಿಗಳ ಸುರಕ್ಷತೆಯು ಮೂಲಭೂತವಾಗಿದೆ. ವಾಸ್ತವವಾಗಿ, ಪ್ರಪಂಚದಾದ್ಯಂತ ಗುಣಮಟ್ಟದ ಆರೋಗ್ಯ ಸೇವೆಗಳು ಪರಿಣಾಮಕಾರಿ, ಸುರಕ್ಷಿತ ಮತ್ತು ಜನ–ಕೇಂದ್ರಿತವಾಗಿರಬೇಕು ಎಂಬ ಸ್ಪಷ್ಟ ಒಮ್ಮತವಿದೆ. ಜೊತೆಗೆ, ಗುಣಮಟ್ಟದ ಆರೋಗ್ಯ ಸೇವೆಯ ಪ್ರಯೋಜನಗಳನ್ನು ಅರಿತುಕೊಳ್ಳಲು, ಆರೋಗ್ಯ ಸೇವೆಗಳು ಸಮಯೋಚಿತ, ಸಮಾನ, ಸಮಗ್ರ ಮತ್ತು ದಕ್ಷವಾಗಿರಬೇಕು ಎಂದರು. ಕಾರ್ಯಕ್ರಮದಲ್ಲಿ ವಿಜಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಜಯಶ್ರೀ, ಎಲ್ಲಾ ಉಪ ಕೇಂದ್ರಗಳ ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಗಂಗಾಧರೆಡ್ಡಿ, ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ, ಆಶಾ ಕಾರ್ಯಕರ್ತೆಯರು, ರೋಗಿಗಳು ಇದ್ದರು.

---

### ಚಳ್ಳಕೆರೆ ನಗರಸಭೆ: ಬಿಡಾಡಿ ದನಗಳ ಮಾಲೀಕರಿಗೆ ಸೂಚನೆ

ಚಿತ್ರದುರ್ಗ: ಚಳ್ಳಕೆರೆ ನಗರದಲ್ಲಿ ಬಿಡಾಡಿ ದನಗಳ ಉಪಟಳ ಹೆಚ್ಚಾಗಿದ್ದು, ರಸ್ತೆಯಲ್ಲಿ ಗುಂಪು ಗುಂಪಾಗಿ ಓಡಾಡುತ್ತಾ, ರಸ್ತೆಯಲ್ಲಿ ಓಡಾಡುವ ನಗರದ ನಾಗರೀಕರಿಗೆ, ಮಕ್ಕಳಿಗೆ, ಮಹಿಳೆಯರಿಗೆ, ವೃದ್ದರಿಗೆ ಹಾಗೂ ವಾಹನ ಸವಾರರಿಗೆ ತೊಂದರೆ ಉಂಟು ಮಾಡುತ್ತಿರುತ್ತವೆ. ದನಗಳು ಗುದ್ದಾಡುತ್ತಾ ಜನಗಳ ಮತ್ತು ರಸ್ತೆಯಲ್ಲಿ ಓಡಾಡುವ ವಾಹನಗಳ ಮೇಲೆರಗುವುದರಿಂದ ಪ್ರಾಣಾಪಾಯವಾಗುವ ಸಂಭವವಿರುತ್ತದೆ. ಸಾರ್ವಜನಿಕರಿಂದ ಈ ಬಗ್ಗೆ ನಗರಸಭೆ ದೂರುಗಳು ಬಂದಿರುತ್ತವೆ. ಆದ್ದರಿಂದ ದನಗಳ ಮಾಲೀಕರು ತಮ್ಮ ದನಗಳನ್ನು ರಸ್ತೆಗೆ ಬಿಡದಂತೆ ತಮ್ಮ ಜಾಗದಲ್ಲಿ ಪಾಲನೆ ಮಾಡಲು ತಿಳಿಸಿದೆ. ಪ್ರಯುಕ್ತ ತಮಗೆ ಸಂಬಂಧಿಸಿದ ದನಗಳಿಗೆ ತಾವೇ ಜವಾಬ್ದಾರರಾಗಿದ್ದು, ಈ ಪ್ರಕಟಣೆಯ ಒಂದು ವಾರದ ನಂತರ ಬಿಡಾಡಿ ದನಗಳನ್ನು ಹಿಡಿದು ಸಾಗಿಸಲಾಗುವುದು ಎಂದು ಚಳ್ಳಕೆರೆ ನಗರಸಭೆ ಪೌರಾಯುಕ್ತ ಸಿ.ಚಂದ್ರಪ್ಪ ತಿಳಿಸಿದ್ದಾರೆ.

### ಹಿರಿಯೂರು ತಾಲ್ಲೂಕು ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಭೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಂ.ತಿಪ್ಪೇಸ್ವಾಮಿ

# ಎಸ್‌ಎಸ್‌ಎಲ್‌ಸಿ: ಗುಣಾತ್ಮಕ ಅಂಕ ಪಡೆಯಲು ಕ್ರಿಯಾಯೋಜನೆ ರೂಪಿಸಿ



» ಚಿತ್ರದುರ್ಗ

ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಗುಣಾತ್ಮಕ ಅಂಕಗಳನ್ನು ಪಡೆಯಲು ಸಹಾಯಕವಾಗುವಂತೆ ಕ್ರಿಯಾಯೋಜನೆ ತಯಾರಿಸಿ ಅದರಂತೆ ಪಠ್ಯ ಬೋಧನೆಯಲ್ಲಿ ತೊಡಗಬೇಕು ಎಂದು ಹಿರಿಯೂರು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಂ.ತಿಪ್ಪೇಸ್ವಾಮಿ ಮುಖ್ಯ ಶಿಕ್ಷಕರಿಗೆ ಸೂಚನೆ ನೀಡಿದರು.

ನಗರದ ವಾಗ್ದೇವಿ ಶಾಲೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರ ಸಭೆಯಲ್ಲಿ ಅವರು ಮಾತನಾಡಿದರು. ಕಳೆದ ವರ್ಷ ಉತ್ತಮ ಫಲಿತಾಂಶ ಬಂದಿದ್ದು, ಈ ಫಲಿತಾಂಶದ ಸ್ಥಾನವನ್ನು ಉಳಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಆದ್ದರಿಂದ ಸೃಜನಾತ್ಮಕವಾಗಿ ಮತ್ತು ಕ್ರಿಯಾಶೀಲವಾಗಿ ಪಠ್ಯ ಬೋಧನೆಯಲ್ಲಿ ತೊಡಗಬೇಕು ಎಂದು ಸಲಹೆ ನೀಡಿದರು. ಇತ್ತೀಚೆಗೆ ಸರ್ಕಾರಿ ಪ್ರೌಢಶಾಲೆ ಪಿಲಾಜನಹಳ್ಳಿ ಹಾಗೂ ವಸಂತನಗರ ಶಾಲೆಗಳಲ್ಲಿ ಕಳ್ಳತನವಾಗಿದ್ದು, ಮುಖ್ಯ ಶಿಕ್ಷಕರು ಹೆಚ್ಚಿನ ಕಾಳಜಿ ವಹಿಸಬೇಕೆಂದು ಸೂಚಿಸಿದರು. ಎನ್ ಎಂ ಎಂ ಎಸ್ ಪರೀಕ್ಷೆಯಲ್ಲಿ ಹೆಚ್ಚಿನ ವಿದ್ಯಾರ್ಥಿಗಳನ್ನು ನೋಂದಣಿ ಮಾಡಿಸಬೇಕು ಎಂದು ಹೇಳಿದರು. ಎಸ್‌ಎಸ್‌ಎಲ್‌ಸಿಯಲ್ಲಿ ಕಳೆದ ವರ್ಷ ಶೇ.100ರಷ್ಟು ಫಲಿತಾಂಶ ಪಡೆದ ಶಾಲೆಗಳ ಮುಖ್ಯ ಶಿಕ್ಷಕರಾದ ಆರ್.ಟಿ.ಎಸ್.ಶ್ರೀನಿವಾಸ, ಗಿರೀಶ ಮತ್ತು ಸುಮಿತ್ರ ಮಾತನಾಡಿದರು. ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಶೂ ಮತ್ತು ಸಾಕ್ಸ್ ವಿತರಣೆಯ ಅನುದಾನ ಬಿಡುಗಡೆಯಾಗಿದ್ದು, ಇಲಾಖೆಯ ನಿಯಮಾನುಸಾರ ಖರೀದಿಸಿ ವಿತರಿಸಲು ಕ್ಷೇತ್ರ ಸಮನ್ವಯಾಧಿಕಾರಿ ಬಿ.ತಿಪ್ಪೇರುದ್ರಪ್ಪ ತಿಳಿಸಿದರು. ಸಭೆಯಲ್ಲಿ ಮುಖ್ಯೋಪಾಧ್ಯಾಯರ ಸಂಘದ ಪದಾಧಿಕಾರಿಗಳಾದ ತಿಪ್ಪೇರುದ್ರಪ್ಪ, ನಾಗನಾಯ್ಕ್ , ಮಂಜುನಾಥ್, ವಿ.ಭಾಗ್ಯ ಇದ್ದರು.

## ಪ್ರಮುಖ ಸುದ್ದಿ

# ಅ.2 ರಂದು ಗಾಂಧೀಜಿ, ಶಾಸ್ತ್ರೀ ಜಯಂತಿ ಆಚರಣೆ

» ದಾವಣಗೆರೆ



ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಶ್ರೀ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತಿಯನ್ನು ಅ.2ರಂದು ಗಾಂಧಿ ಭವನದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಕ್ಟೋಬರ್ 2 ರಂದು ನಡೆಯಲಿರುವ ಗಾಂಧೀ ಜಯಂತಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿಯ ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅ.2 ರಂದು ನಗರದ ಗಾಂಧೀ ಭವನದಲ್ಲಿ ಬೆಳಗ್ಗೆ 10.30 ಗಂಟೆಗೆ ರಾಷ್ಟ್ರಪಿತ ಮಹತ್ಮಾ ಗಾಂಧೀಜಿ ಹಾಗೂ ಶ್ರೀ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ತಿರ್ಮಾನಿಸಲಾಗಿದೆಹೀ ವೇಳೆ ಸರ್ವಧರ್ಮ ಪ್ರಾರ್ಥನೆ, ದೇಶಭಕ್ತಿ ಗೀತೆಗಳ ಗಾಯನ ಮತ್ತು ಉಪನ್ಯಾಸವನ್ನು ಏರ್ಪಡಿಸಲಾಗುತ್ತಿದೆ. ಕಳೆದ ಬಾರಿಯಂತೆ ಈ ಬಾರಿಯು ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಜಯಂತಿಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು.

ಕಾರ್ಯಕ್ರಮದಲ್ಲಿ ಹೂ ಬದಲಾಗಿ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜೀವನ ಚರಿತ್ರೆ, ಸಾಧನೆ, ವಿಮರ್ಶೆಗಳಂತಹ ಪುಸ್ತಕಗಳನ್ನೇ ನೀಡಬೇಕು. ಗಣೇಶ ಚತುರ್ಥಿ ಅಂಗವಾಗಿ ಮಣ್ಣಿನ ಗಣೇಶ ವಿಗ್ರಹಗಳ ಬದಲಾಗಿ ಬೆಲ್ಲದ ವಿಗ್ರಹಗಳನ್ನು ಬಳಸಿದಾಗ ರೈತರಿಗೂ ಅನುಕೂಲ ಹಾಗೂ ಮಾಲಿನ್ಯ ತಡೆಗಟ್ಟಬಹುದು ಎಂದರು.

ಗಾಂಧೀ ಜಯಂತಿ ಅಂಗವಾಗಿ ಪ್ರಬಂಧ ಸ್ಪರ್ಧೆ; ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಗಾಂಧಿ ಜಯಂತಿ ಅಂಗವಾಗಿ ಪ್ರೌಢಶಾಲಾ, ಪದವಿ ಪೂರ್ವ, ಕಾಲೇಜು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಗಾಂಧಿ ಕುರಿತಂತೆ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಶಿಕ್ಷಣ ಇಲಾಖೆಯಿಂದ ಎಲ್ಲಾ ಪ್ರೌಢಶಾಲೆ,ಪದವಿಪೂರ್ವಕಾಲೇಜುಗಳಿಗೆ ಸುತ್ತೋಲೆ ಕಳುಹಿಸಿ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸುವ ಮೂಲಕ ಅತ್ಯುತ್ತಮ 3 ಪ್ರಬಂಧಗಳನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಕಳುಹಿಸಲು ಮತ್ತು ಪ್ರತ್ಯೇಕವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಎಂದು ನಗದು ಬಹುಮಾನ ನೀಡಲಾಗುತ್ತದೆ. ಜಿಲ್ಲಾ ಮಟ್ಟದಲ್ಲಿ ಪ್ರಕಟವಾದ ಅತ್ಯುತ್ತಮ ಪ್ರಬಂಧಗಳಿಗೆ ರಾಜ್ಯ ಮಟ್ಟದ ಪ್ರಶಸ್ತಿಗೆ ಕಳುಹಿಸಿಕೊಡಲಾಗುತ್ತದೆ ಎಂದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣನಾಯ್ಕ್, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಪಾಲಿಕೆ ಆಯುಕ್ತೆ ರೇಣುಕಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಮಗೊಂಡ ಬಸರ್ಗಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ಎಸ್‌ಆರ್‌ಎಸ್ ಕಾಂಪ್ಲೆಕ್ಸ್ ಕೆಳಭಾಗದಲ್ಲಿ ಮಾರಾಟಕ್ಕೆ ಸಿದ್ಧವಿದ್ದ ಪಿಒಪಿ ಗಣಪತಿಗಳು ಸೀಜ್



» **ಚಳ್ಳಕೆರೆ**

ಗೌರಿಗಣೇಶ ಹಬ್ಬದ ಸಡಗರ ಹೆಚ್ಚಾಗಿದ್ದು, ಭಕ್ತರು ಭಕ್ತಿಯಿಂದ ಶ್ರೀಗಣೇಶನ ಮೂರ್ತಿಯನ್ನು ಖರೀದಿಸಲು ಮುಗಿಬಿದಿದ್ದು ಇದರ ಬೆನ್ನಹಿಂದೆಯೇ ಆಗಾಗ ಮಳೆ ಬಂದು ಭಕ್ತರಿಗೂ ಮತ್ತು ಮಾರಾಟಗಾರರಿಗೂ ಕಿರಿಕಿರಿ ಉಂಟಾಗುತ್ತಿದೆ. ನಗರಸಭಾ ಆಡಳಿತ ಹಬ್ಬಕ್ಕೂ ಮುನ್ನ ಯಾವುದೇ ಕಾರಣಕ್ಕೂ ಪಿಒಪಿ ಗಣಪತಿಗಳನ್ನು ಮಾರಾಟ ಮಾಡದೆ ಮಣ್ಣಿನಿಂದ ತಯಾರಿಸಿ ಗಣಪತಿಗಳನ್ನು ಮಾರಾಟ ಮಾಡಬೇಕೆಂದು ಪ್ರಚಾರಪಡಿತ್ತು. ಮಾಲಿನ್ಯ ನಿಯಂತ್ರಣಮಂಡಳಿ ಸೂಚನೆಯಂತೆ ನಗರಸಭೆ ಗಣೇಶನ ವಿಗ್ರಹ ಮಾರಾಟಗಾರರಿಗೆ ಪದೇಪದೆ ಧ್ವನಿವರ್ಧಕದ ಮೂಲಕ ಪಿಒಪಿ ಗಣಪತಿ ಮಾರಾಟವನ್ನು ನಿಷೇದಿಸಿದ್ದು ಕೇವಲ ಮಣ್ಣಿನ ವಿಗ್ರಹ ಮಾರಾಟ ಮಾಡುವಂತೆ ಕಟ್ಟುನಿಟ್ಟಾಗಿ ಸೂಚನೆ ನೀಡಿದ್ದರು. ಆದರೆ, ನಗರಸಭೆಯ ಕಣ್ಣು ತಪ್ಪಿಸಿ ಗಣೇಶ ವಿಗ್ರಹ ಮಾರಾಟಗಾರರು ಖಾಸಗಿ ಬಸ್ ನಿಲ್ದಾಣದ ಎಸ್‌ಆರ್ ಕಾಂಪ್ಲೆಕ್ಸ್ ಕೆಳಮಹಡಿಯ ಗೋಡಾನ್‌ನಲ್ಲಿ ಸುಮಾರು 20ಕ್ಕೂ ಹೆಚ್ಚು ಪಿಒಪಿ ಗಣಪತಿಯನ್ನು ಮಾರಾಟ ಮಾಡಲು ತಂದಿದ್ದ ಬಗ್ಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿತ ಸಹಾಯಕ ಪರಿಸರ ಅಧಿಕಾರಿ ರಾಜೇಶ್ ಪಿಒಪಿ ಗಣಪತಿ ಮಾರಾಟ ಬಗ್ಗೆ ದೂರು ನೀಡಿದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಪೌರಾಯುಕ್ತ ಸಿ.ಚಂದ್ರಪ್ಪ ಪಿಒಪಿ ಗಣಪತಿ ಮೂರ್ತಿಗಳನ್ನು ಸೀಜ್ ಮಾಡಿದ್ದಾರೆ. ಕಾರ್ಯಚರಣೆಯಲ್ಲಿ ನೈರ್ಮಲ್ಯ ಇಂಜಿನಿಯರ್ ಕೆ.ವಿ.ನರೇಂದ್ರಬಾಬು, ಹಿರಿಯ ಆರೋಗ್ಯ ನಿರೀಕ್ಷಕ ಮಹಲಿಂಗಪ್ಪ, ದಾದಾಪೀರ್, ಗಣೇಶ, ಗೀತಾಕುಮಾರಿ, ಕಂದಾಯ ನಿರೀಕ್ಷಕ ವಿಶ್ವನಾಥ, ಗುರುಪ್ರಸಾದ್ ಇದ್ದರು.

## ಪಿ.ಓ.ಪಿ. ಗಣೇಶ ಬದಲಿಗೆ ಪರಿಸರ ಸ್ನೇಹಿ ಗಣಪತಿ ಪೂಜಿಸುವಂತೆ ನಗರಸಭೆಯಿಂದ ಜಾಗೃತಿ

» **ಚಿತ್ರದುರ್ಗ**

ಸಾರ್ವಜನಿಕರು ಪಿ.ಓ.ಪಿ. ಗಣಪತಿ ಬದಲಿಗೆ ಜೇಡಿ ಮಣ್ಣಿನಿಂದ ತಯಾರಿಸುವ ಪರಿಸರ ಸ್ನೇಹಿ ಗಣಪತಿಯನ್ನು ಪ್ರತಿಷ್ಠಾಪಿಸಿ ವಿಸರ್ಜಿಸುವಂತೆ ನಗರಸಭೆ ಪೌರಾಯುಕ್ತರಾದ ಎಂ.ರೇಣುಕ ಮನವಿ ಮಾಡಿದರು. ನಗರಸಭೆ ವತಿಯಿಂದ ನಗರದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಜಾಗೃತಿ ಜಾಥಾಕೆ ಚಾಲನೆ ನೀಡಿ ಮಾತನಾಡಿದ ಪೌರಾಯುಕ್ತರಾದ ಎಂ.ರೇಣುಕ ಪಿ.ಓ.ಪಿ. ಗಣಪತಿ ಮೂರ್ತಿಗಳನ್ನು ಪೂಜಿಸಿ ವಿಸರ್ಜಿಸುವುದರಿಂದ ನೀರು ಕಲುಷಿತಗೊಂಡು ಜಲಚರಗಳು ಸಾಯುತ್ತವಲ್ಲದೆ ಪರಿಸರಕ್ಕೆ ಹಾನಿಯಾಗುವುದಲ್ಲದೆ ಸಕಲ ಜೀವರಾಶಿಗಳ ಆರೋಗ್ಯದ ಮೇಲೆ ದುಷ್ಪರಿಣಾಮವಾಗಲಿದೆ. ಹಾಗಾಗಿ ವ್ಯಾಪಾರಿಗಳು ಪಿ.ಓ.ಪಿ.ಗಣೇಶ ಮೂರ್ತಿಗಳನ್ನು ಮಾರಾಟ ಮಾಡಬಾರದು. ಎಲ್ಲರೂ ಪರಿಸರ ಸ್ನೇಹಿ ಗಣಪತಿಯನ್ನು ಪೂಜಿಸಿ ಪರಿಸರವನ್ನು ಕಾಪಾಡುವಂತೆ ವಿನಂತಿಸಿದ ರೇಣುಕರವರು ಗಣಪತಿ ಪ್ರತಿಷ್ಠಾಪಿಸುವವರು ಪೊಲೀಸ್ ಇಲಾಖೆ, ಬೆಸ್ಕಾಂ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕೆಂದರು.ನಗರಸಭೆ ನಿಗಧಿಪಡಿಸಿರುವ ಸ್ಥಳಗಳಲ್ಲಿ ಮಾತ್ರ ಗಣಪತಿ ಮೂರ್ತಿಗಳನ್ನು ವಿಸರ್ಜಿಸಬೇಕು. ಒಂದು ವೇಳೆ ನಗರಸಭೆಯ ಸೂಚನೆಗಳನ್ನು ಉಲ್ಲಂಘಿಸಿದಲ್ಲಿ ಅಂತಹವರ ಮೇಲೆ ದಂಡ ಮತ್ತು ಶಿಸ್ತಿನ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು.ನಗರಸಭೆ ಪರಿಸರ ಇಂಜಿನಿಯರ್ ಜಾಫರ್, ಹೆಲ್ತ್ ಇನ್ಸ್‌ಪೆಕ್ಟರ್‌ಗಳಾದ ನಾಗರಾಜ್, ಭಾರತಿ, ಬಸವರಾಜ್, ದಫೇದಾರ್ ಹಾಗೂ ಪೌರ ಕಾರ್ಮಿಕರು ಜಾಥದಲ್ಲಿ ಭಾಗವಹಿಸಿದ್ದರು.

## ನ್ಯಾಷನಲ್ ಮೀನ್ಸ್-ಕಮ್ ಮೆರಿಟ್ ವಿದ್ಯಾರ್ಥಿ ವೇತನ ಪರೀಕ್ಷೆಗೆ ಅರ್ಜಿ

» **ಚಿತ್ರದುರ್ಗ**

2023–24ನೇ ಸಾಲಿನ ನ್ಯಾಷನಲ್ ಮೀನ್ಸ್–ಕಮ್ ಮೆರಿಟ್ ವಿದ್ಯಾರ್ಥಿ ವೇತನ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. 2023ರ ಆಕ್ಟೋಬರ್ 4 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಶಾಲಾ ಮುಖ್ಯಸ್ಥರು, ಉಪಪ್ರಾಂಶುಪಾಲರು ತಮ್ಮ ಶಾಲಾ ವಿದ್ಯಾರ್ಥಿಗಳ ಅರ್ಜಿಗಳನ್ನು ಕಡ್ಡಾಯವಾಗಿ ಆನ್‌ಲೈನ್ ಮೂಲಕವೇ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಎನ್.ಎಂ.ಎಂ.ಎಸ್ ನೋಡೆಲ್ ಅಧಿಕಾರಿಗಳನ್ನು ಸಂಪರ್ಕಿಸಬೇಕೆಂದು ಡಯಟ್ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕ ನಾಸೀರುದ್ದೀನ್ ತಿಳಿಸಿದ್ದಾರೆ.

### ಯುವ ಜನೋತ್ಸವದ ಅಂಗವಾಗಿ ಮ್ಯಾರಾಥಾನ್ ಓಟದ ಸ್ಪರ್ಧೆಗೆ ಡಿಹೆಚ್‌ಒ ಡಾ.ಆರ್.ರಂಗನಾಥ್ ಚಾಲನೆ

# ಎಚ್‌ಐವಿ ಏಡ್ಸ್ ಅರಿವು ಮೂಡಿಸಿ: ಡಿಎಚ್‌ಓ

» **ಚಿತ್ರದುರ್ಗ**

ಯುವ ಜನತೆಯಲ್ಲಿ ಎಚ್‌ಐವಿ ಏಡ್ಸ್ ಅರಿವು ಮೂಡಿಸಿ ಸೋಂಕು ಬರದಂತೆ ಎಚ್ಚರಿಕೆವಹಿಸುವುದು. ಸೋಂಕಿತರಿಗಿರುವ ಕಳಂಕ ತಾರತಮ್ಯ ಹೋಗಲಾಡಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್. ರಂಗನಾಥ್ ಹೇಳಿದರು.

ನಗರದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಲ್ಲಿ ಶನಿವಾರ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕದ ವತಿಯಿಂದ ಯುವಜನೋತ್ಸವದ ಅಂಗವಾಗಿ ಮ್ಯಾರಾಥಾನ್ ಸ್ಪರ್ಧೆಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಎಚ್‌ಐವಿ ಏಡ್ಸ್ ಸೋಂಕಿನ ವಿರುದ್ಧ ಹೋರಾಡಲು, ಅರಿವು ಮೂಡಿಸಲು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಸಿ.ಓ.ಸುಧಾ ಮಾತನಾಡಿ, ಯುವಜನೋತ್ಸವದ ಅಂಗವಾಗಿ ಕಾಲೇಜು ವಿದ್ಯಾರ್ಥಿಗಳಿಗೆ 5 ಕಿ.ಮೀ ಮ್ಯಾರಾಥಾನ್ ಓಟದ ಸ್ಪರ್ಧೆ ಹಮ್ಮಿಕೊಳ್ಳಲಾಗಿದ್ದು, ಎಚ್‌ಐವಿ ಏಡ್ಸ್ ಬಗ್ಗೆ ಅರಿವು, ಏಡ್ಸ್ ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ ತಾರತಮ್ಯವನ್ನು ತಡೆಗಟ್ಟುವುದು, ಎಚ್‌ಐವಿ ಏಡ್ಸ್ ನಿಯಂತ್ರಣ ಕಾಯ್ದೆ, ಉಚಿತ ಎಚ್‌ಐವಿ ಏಡ್ಸ್ ರಾಷ್ಟ್ರೀಯ ಸಹಾಯವಾಣಿ 1097 ಎಸ್‌ಟಿಐ ಇತ್ಯಾದಿಗಳ ಬಗ್ಗೆ ಯುವ ಜನತೆಯಲ್ಲಿ ಅರಿವು ಮೂಡಿಸಲಾಗುತ್ತದೆ ಎಂದರು.



ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಕನಕವೃತ್ತದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಯುವಜನೋತ್ಸವದ ಅಂಗವಾಗಿ ಮ್ಯಾರಾಥಾನ್ ಓಟದ ಸ್ಪರ್ಧೆಗೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್.ರಂಗನಾಥ್ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಎಚ್‌ಐವಿ ಏಡ್ಸ್ ಜಾಗೃತಿಗಾಗಿ ಯುವ ಜನತೆ ಮುಂದೆ ಬರಬೇಕು. ಮ್ಯಾರಾಥಾನ್ ಸ್ಪರ್ಧೆಯನ್ನು ಎಚ್‌ಐವಿ ಏಡ್ಸ್ ಅರಿವು ಮೂಡಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿದೆ ಎಂದರು.

ವಿಜೇತರಿಗೆ ಬಹುಮಾನ ವಿತರಣೆ: ಮ್ಯಾರಾಥಾನ್ ಓಟದ ಸ್ಪರ್ಧೆಯಲ್ಲಿ ಭಾಗವಹಿಸಿದ ಯುವಕ–ಯುವತಿಯರಿಗೆ ಪ್ರತ್ಯೇಕವಾಗಿ ನಗದು ಬಹುಮಾನ ವಿತರಿಸಲಾಯಿತು. ಮೊದಲ ಬಹುಮಾನ ರೂ.5000/–, ದ್ವಿತೀಯ ಬಹುಮಾನ ರೂ.3500/–, ತೃತೀಯ ಬಹುಮಾನ ರೂ.2500/– ಹಾಗೂ 4 ಮಂದಿ ಯುವಕರಿಗೆ ಹಾಗೂ 3 ಮಂದಿ ಯುವತಿಯರಿಗೆ ತಲಾ ರೂ.1000/– ದಂತೆ ಒಟ್ಟು 7 ಸಮಾಧಾನಕರ ಬಹುಮಾನ ನೀಡಲಾಯಿತು.

ಎಚ್‌ಐವಿ/ಏಡ್ಸ್ ಕುರಿತು ಜಿಲ್ಲಾಮಟ್ಟದಲ್ಲಿ ಯುವ ಜನೋತ್ಸವದ ಅಂಗವಾಗಿ ರಾಷ್ಟ್ರೀಯ ಏಡ್ಸ್ ನಿಯಂತ್ರಣ ಮಂಡಳಿ ಮಾರ್ಗಸೂಚಿಯನ್ವಯ ಕಾಲೇಜು ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ 5 ಕಿ.ಮೀ ಮ್ಯಾರಾಥಾನ್ ಓಟದ ಸ್ಪರ್ಧೆಯು ಕನಕ ವೃತ್ತದಿಂದ ಆರಂಭವಾಗಿ ಮುಖ್ಯ ವೃತ್ತ, ಪ್ರವಾಸಿ ಮಂದಿರ, ಆಸ್ಪತ್ರೆ ವೃತ್ತದ ಮಾರ್ಗವಾಗಿ ಒನಕೆ ಓಬವ್ವ ಸ್ಟೇಡಿಯಂವರೆಗೂ ಸಾಗಿತು.

ಜಿಲ್ಲಾ ಮೇಲ್ವಿಚಾರಕ ವಿ.ಅಶೋಕ ಅವರು ಎಚ್‌ಐವಿ ಕುರಿತು ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್, ವಿವಿಧ ಸ್ಪೋರ್ಟ್ಸ್ ಕ್ಲಬ್ ಸದಸ್ಯರು, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಸಿಬ್ಬಂದಿ, ಸ್ವಯಂ ಸೇವಾ ಸಂಸ್ಥೆಗಳ ಸದಸ್ಯರು ಇದ್ದರು.

### ಭಗವಾನ್ ಶ್ರೀ ವಿಶ್ವಕರ್ಮ ಜಯಂತಿ

# ಸರ್ಕಾರದ ಸೌಲಭ್ಯ ಪಡೆದು ಏಳಿಗೆಯತ್ತ ಮುಖ ಮಾಡಿ



» **ದಾವಣಗೆರೆ**

ವಿಶ್ವಕರ್ಮ ಸಮುದಾಯ ಸರ್ಕಾರದ ವಿವಿಧ ಸೌಲಭ್ಯಗಳನ್ನು ಪಡೆದು ಏಳಿಗೆಯತ್ತ ಮುಖ ಮಾಡಬೇಕು ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ತಿಳಿಸಿದರು.

ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ವಿಶ್ವಕರ್ಮ ಸಮಾಜ(ರಿ) ಇವರ ಸಹಯೋಗದೊಂದಿಗೆ ನಗರದ ಶ್ರೀ ಕಾಳಿಕಾದೇವಿ ದೇವಸ್ಥಾನದ ಆವರಣದಲ್ಲಿ ನಡೆದ ಭಗವಾನ್ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಡ ಜನರಿಗೆ ಸರ್ಕಾರವು 5 ಗ್ಯಾರಂಟಿಗಳನ್ನು ಜಾರಿಗೊಳಿಸಿದ್ದು, ಈಗಾಗಲೇ 4 ಗ್ಯಾರಂಟಿಗಳು ಕಾರ್ಯಗತಗೊಂಡಿವೆ. ಜನರಿಗೆ 5ಕೆ.ಜಿ ಅಕ್ಕಿ ಬದಲಾಗಿ 10ಕೆ.ಜಿ ನೀಡಲಾಗುತ್ತದೆ. 200 ಯುನಿಟ್‌ಗಳಷ್ಟು ವಿದ್ಯುತ್ ಉಚಿತವಾಗಿ ನೀಡುತ್ತಿದೆ. ಮತ್ತು ಮನೆಯ ಯಜಮಾನಿಗೆ ಕುಟುಂಬದ ನಿರ್ವಹಣೆಗೆ ತಿಂಗಳಿಗೆ ರೂ.2000 ಗಳನ್ನು ನೀಡಿ ರಾಜ್ಯಕ್ಕೆ ಹಾಗೂ ದೇಶಕ್ಕೆ ಮಾದರಿಯಾಗಿದೆ. ಗೃಹಲಕ್ಷ್ಮಿ ಯೋಜನೆಯಡಿ ಜಿಲ್ಲೆಯಲ್ಲಿ 3 ಲಕ್ಷದ 40 ಸಾವಿರ ಮಹಿಳೆಯರು ನೊಂದಾಹಿಸಿದ್ದು, ಸಣ್ಣ ಪುಟ್ಟ ತಾಂತ್ರಿಕ ಸಮಸ್ಯೆಗಳನ್ನು ಶೀಘ್ರ ಬಗೆಹರಿಸಿ, ಮಾಸಿಕ 2000 ಪಾವತಿಸಲಾಗುತ್ತದೆ. ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಸರ್ಕಾರಿ ಸಾರಿಗೆಯಲ್ಲಿ ಉಚಿತವಾಗಿ ಪ್ರಯಣಿಸಲು ಅನುಕೂಲ ಮಾಡಿಕೊಡಲಾಗಿದೆ. ಜನರು ನಮ್ಮನ್ನು ಕೇವಲ ಹೊಗಳುವುದಲ್ಲದೇ ಸಲಹೆ, ಸೂಚನೆಗಳನ್ನು ನೀಡಬೇಕು ಎಂದರು.

ಜಿಲ್ಲೆಯಲ್ಲಿ ವಿಶ್ವಕರ್ಮ ಸಮುದಾಯದ ಯಾವುದೇ ಕುಂದು ಕೊರತೆಗಳಿದ್ದಲ್ಲಿ ಮನವಿ ಮಾಡುವ ಮೂಲಕ ಸರ್ಕಾರದ ವತಿಯಿಂದ ಪರಿಹರಿಸಿಕೊಳ್ಳಬೇಕು, ಜನರಿಗೆ ಮೂಲಭೂತವಾಗಿ ವಸತಿ, ಆರೋಗ್ಯ, ವಿದ್ಯಾಭ್ಯಾಸ ಬೇಕಾಗಿದೆ. ಅದನ್ನು ನಮ್ಮ ಸರ್ಕಾರ ಮಾಡುತ್ತಿದೆ ಎಂದರು.

ಸಂಗೀತ ಕಾರ್ಯಕ್ರಮ: ಅಚ್ಯುತಾನಂದ ಬಿ. ಮತ್ತು ಸಂಗಡಿಗರು ಶ್ರೀ ವಿಶ್ವಕರ್ಮನ ಕುರಿತು ಸಂಗೀತ ಕಾರ್ಯಕ್ರಮ ನಡೆಸಿದರು.

ಅಪರ ಜಿಲ್ಲಾಧಿಕಾರಿ ಪಿ. ಎನ್ ಲೋಕೇಶ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣ ನಾಯ್ಕ್, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ಬಸಾಪುರದ ನಾಗೇಂದ್ರಚಾರ್, ವೃಷಭೇಂದ್ರಾಚಾರ್, ಶಿವಾನಂದ, ಪೂರ್ವಜಾರ್ ಉಪಸ್ಥಿತರಿದ್ದರು.

### ಗೌರಸಮುದ್ರ ಶ್ರೀಮಾರಮ್ಮದೇವಿ ಜಾತ್ರೆ :

# ಭಕ್ತರ ಅನುಕೂಲಕ್ಕಾಗಿ ವ್ಯವಸ್ಥೆ ಕೈಗೊಂಡ ತಾಲ್ಲೂಕು ಆಡಳಿತ

» **ಚಳ್ಳಕೆರೆ**

ಜಿಲ್ಲೆಯ ಪ್ರತಿಷ್ಠಿತ ಜಾತ್ರೆಗಳಲ್ಲಿ ಒಂದಾದ ತಾಲ್ಲೂಕಿನ ಗೌರಸಮುದ್ರ ಶ್ರೀಮಾರಮ್ಮ ದೇವಿ ಜಾತ್ರೆ ಸೆ.19ರ ಮಂಗಳವಾರ ನಡೆಯಲಿದ್ದು, ಜಾತ್ರೆಗೆ ಆಗಮಿಸುವ ಭಕ್ತರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ತಾಲ್ಲೂಕು ಆಡಳಿತ ಭರದ ಸಿದ್ದತೆ ನಡೆಸಿದೆ.

ಈ ಬಗ್ಗೆ ಮಾಹಿತಿ ನೀಡಿದ ಪಂಚಾಯಿತಿ ಇಂಜಿನಿಯರಿಂಗ್ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರೆ ಎನ್.ಕಾವ್ಯ, ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಬಹುತೇಕ ರಸ್ತೆಯಲ್ಲಿದ್ದ ಗುಂಡಿಗಳನ್ನು ಮುಚ್ಚಲಾಗಿದೆ, ತುಮಲು ಪ್ರದೇಶದ ಡಾಂಬರೀಕರಣಗೊಂಡ ರಸ್ತೆಯಲ್ಲೂ ಸಹ ಹೊಂಡಗಳು ಬಿದಿದ್ದು ಅವುಗಳಿಗೂ ಸಹ ನೂತನವಾಗಿ ಗುಣಮಟ್ಟದ ಡಾಂಬರ್‌ನಿಂದ ರಸ್ತೆ ಕಾಮಗಾರಿಯನ್ನು ಸಂಪೂರ್ಣಗೊಳಿಸಲಾಗಿದೆ. ವಾಹನ ಸವಾರರಿಗೆ ಹಾಗೂ ಆಗಮಿಸುವ ಎಲ್ಲಾ ಭಕ್ತರಿಗೆ ಸಂಚಾರದ ವ್ಯವಸ್ಥೆ ಕಾಡದಂತೆ ಎಚ್ಚರಿಕೆ ವಹಿಸಲಾಗಿದೆ ಎಂದರು.

ಕುಡಿಯುವ ನೀರು ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ದಯಾನಂದಸ್ವಾಮಿ ಮಾತನಾಡಿ, ಗ್ರಾಮದ ಕೆರೆಯಂಗಳದಲ್ಲಿ ಒಂದು ಬೋರ್ ಇದ್ದು, ಮತ್ತೊಂದು ಬೋರ್‌ನ್ನು ಭಕ್ತರಿಗಾಗಿ ಕೊರೆಸಲಾಗಿದೆ. ಇತ್ತೀಚೆಗಷ್ಟೇ ಭೇಟಿ ನೀಡಿದ್ದ ಅಧಿಕಾರಿಗಳು ಹೆಚ್ಚುವರಿ ಬೋರ್ ಕೊರೆಸುವಂತೆ ಸೂಚನೆ ನೀಡಿದ್ದು, ಅದನ್ನೂ ಸಹ ಪೂರೈಸಲಾಗಿದೆ. ಜಾತ್ರೆಗೆ ಬರುವ ಭಕ್ತರಿಗೆ



ಯಾವುದೇ ಹಂತದಲ್ಲೂ ಕುಡಿಯುವ ನೀರಿನ ತೊಂದರೆಯಾಗದಂತೆ ಜಾಗ್ರತೆ ವಹಿಸಲಾಗಿದೆ ಎಂದರು.

ತಳಕು ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ ಮಾಹಿತಿ ನೀಡಿ, ಜಿಲ್ಲಾ ರಕ್ಷಣಾಧಿಕಾರಿ, ಹೆಚ್ಚುವರಿ ರಕ್ಷಣಾಧಿಕಾರಿ ಮತ್ತುಉಪವಿಭಾಗದ ಡಿವೈಎಸ್ಪಿಯವರ ಮಾರ್ಗದರ್ಶನದಲ್ಲಿ ಪೊಲೀಸ್ ಬಂದೋಬಸ್ತನ್ನು ಹಮ್ಮಿಕೊಳ್ಳಲಾಗಿದೆ. ಸೆ.18ರ ಸೋಮವಾರ ಬೆಳಗ್ಗೆಯಿಂದಲೇ ಇಡೀ ಪ್ರದೇಶದಲ್ಲಿ ಪೊಲೀಸರು ತಮಗೆ ನಿಯೋಜನೆಗೊಳಿಸಿದ ಸ್ಥಳದಲ್ಲಿ ಕಾರ್ಯವನ್ನು ನಿರ್ವಹಿಸಲಿದ್ದಾರೆ. ಪ್ರಾಣಿ ಬಲಿ ತಡೆಗೆ ಹೆಚ್ಚು ಆದ್ಯತೆ ನೀಡಲಾಗುತ್ತದೆ. ಸಂಚಾರ ನಿಯಂತ್ರಣವೂ ಸೇರಿದಂತೆ ಸೂಕ್ತಭದ್ರತೆಯನ್ನು ಒದಗಿಸಲಾಗಿದ್ದು, ಅಧಿಕಾರಿಗಳೂ ಸೇರಿದಂತೆ ಸುಮಾರು 400ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ಜಾತ್ರಾ ಸಮಯದಲ್ಲಿ ಕಾರ್ಯನಿರ್ವಹಿಸುವರು ಎಂದರು.



## ಮೋದಿ ಜನ್ಮದಿನ: ಹಣ್ಣು ವಿತರಣೆ

ಪ್ರಧಾನಿ ನರೇಂದ್ರಮೋದಿರವರ ಹುಟ್ಟುಹಬ್ಬದ ಅಂಗವಾಗಿ ಬಿಜೆಪಿ. ನಗರ ಯುವ ಮೋರ್ಚಾದಿಂದ ಜಿಲ್ಲಾಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ವಿತರಣೆ.

ಪ್ರಮುಖ ಸುದ್ದಿ


### ನೊಂದಾವಣೆ ಶುಲ್ಕ ಹೆಚ್ಚಿಸಿದ ಉಪನೊಂದಾವಣಾಧಿಕಾರಿಗಳ ಕ್ರಮಕ್ಕೆ ರಿಯಲ್‌ಎಸ್ಟೇಟ್ ಉದ್ಯಮಿಗಳು ಆಕ್ರೋಶ

# ನೊಂದಾವಣೆ ಶುಲ್ಕ ಮಿತಿಗೊಳಿಸಲು ತಹಶೀಲ್ದಾರ್ ಸಲಹೆ

» **ಚಳ್ಳಕೆರೆ**

ನಗರದ ಉಪನೊಂದಾವಣಾಧಿಕಾರಿಗಳ ಕಚೇರಿಯಲ್ಲಿ ಉಪನೊಂದಾವಣಾಧಿಕಾರಿಗಳು ಸರ್ಕಾರದ ನಿಯಮಾವಳಿಗಳನ್ನು ಮೀರಿ ನೊಂದಣೆ ಶುಲ್ಕವನ್ನು ವಿಪರೀತ ಹೆಚ್ಚಿಸಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ, ಕೂಡಲೇ ಸರ್ಕಾರ ನಿಯಮಗಳ ಅನುಸಾರವೇ ನೊಂದಾವಣೆ ಶುಲ್ಕ ಪಡೆಯಬೇಕೆಂದು ಒತ್ತಾಯಿಸಿ ತಹಶೀಲ್ದಾರ್‌ಗೆ ಮನವಿ ನೀಡಲಾಯಿತು.

ನಗರದಲ್ಲಿ ಕಳೆದ ಸುಮಾರು 40 ವರ್ಷಗಳಿಂದ ಉಪನೊಂದಾವಣಾ ಕಚೇರಿಯ ಬಳಿ ಕಾರ್ಯನಿರ್ವಹಿಸುತ್ತಿರುವ ದಸ್ತಾವೇಜುದಾರರು, ರಿಯಲ್ ಎಸ್ಟೇಟ್ ಮಾಲೀಕರು, ಸಾರ್ವಜನಿಕರು ಈ ಬಗ್ಗೆ ಆಕ್ರೋಶ ವ್ಯಕ್ತಪಡಿಸಿ ಸರ್ಕಾರ ಇತ್ತೀಚಿಗಷ್ಟೇ ಉಪನೊಂದಾವಣೆ ಶುಲ್ಕವನ್ನು ಕೇವಲ ಶೇ.30ರಷ್ಟು ಹೆಚ್ಚಿಸಿ ಆದೇಶ ನೀಡಿದೆ. ಆದರೆ, ಇಲ್ಲಿನ ನೊಂದಾವಣೆ ಅಧಿಕಾರಿಗಳು ಮಾತ್ರ ಈ ಶುಲ್ಕವನ್ನು ಶೇ.100ರಿಂದ 300ರಷ್ಟು ಏರಿಕೆ ಮಾಡುವ ಮೂಲಕ ಎಲ್ಲರ ಕೆಂಗಣ್ಣಿಗೆ ಗುರಿಯಾಗಿದ್ದಾರೆ. ತಾಲ್ಲೂಕಿನಾದ್ಯಂತ ಬರಗಾಲದ ದುಸ್ಥಿತಿ ಇದ್ದು, ನೊಂದಾವಣೆ ಮಾಡಿಸಿಕೊಳ್ಳುವವರ ಸಂಖ್ಯೆ ಕಡಿಯಾಗುತ್ತಿದೆ. ದಿಢೀರನೇ ನೊಂದಾವಣೆ ಶುಲ್ಕವನ್ನು ಶೇ.300ಕ್ಕೆ ಏರಿಸಿದ್ದನ್ನು ಮನಗಂಡ ಹಲವಾರು ರಿಯಲ್ ಎಸ್ಟೇಟ್ ಮಾಲೀಕರು ಸರ್ಕಾರ ಹೆಚ್ಚಿಸಿದ ಶುಲ್ಕವನ್ನು ನೀಡಲು ಸಾಧ್ಯವಿಲ್ಲವೆನ್ನುತ್ತಿದ್ದಾರೆ. ಈ ಹಿಂದೆ ನಗರಸಭೆಯ ಅಧಿಕಾರಿಗಳು ವಿವಿಧ ವಿಭಾಗವಾರು ಶುಲ್ಕವನ್ನು ನಿಗದಿಗೊಳಿಸಿದ್ದಾರೆ, ನಗರಕ್ಕೆ ಹೊಂದಿಕೊಂಡಿರುವ ಚಿತ್ರಯ್ಯನಹಟ್ಟಿಯಲ್ಲಿ ಸ್ಕ್ವಯರ್ ಮೀಟರ್‌ಗೆ 1200 ನೊಂದಾವಣೆ ಶುಲ್ಕವಿದ್ದರೆ ಈಗ ಅದನ್ನು 6500ಕ್ಕೆ ಹೆಚ್ಚಿಸಲಾಗಿದೆ.



ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿದ ರಿಯಲ್‌ಎಸ್ಟೇಟ್ ಉದ್ಯಮಿಹಾಲಿನರೇವಣ್ಣ, ನಗರಸಭಾ ಸದಸ್ಯ ಟಿ.ಮಲ್ಲಿಕಾರ್ಜುನ್, ಕೆ.ವೀರಭದ್ರಪ್ಪ, ಬಿ.ಟಿ.ರಮೇಶ್‌ಗೌಡ, ವೈ.ಪ್ರಕಾಶ್, ಹೊಸಮನೆ ಸ್ವಾಮಿ, ಆರ್. ಜಗದೀಶ್, ಎಸ್.ಮುಜೀಬ್, ಪ್ರಕಾಶ್, ಬಾಲರಾಜು ಮುಂತಾದವರು 20 ಲಕ್ಷ ಬೆಲೆ ಬಾಳುವ ಆಸ್ತಿ ಮೌಲ್ಯವನ್ನು ಪರಿಗಣಿಸಿ ಅದನ್ನು 26 ಲಕ್ಷಕ್ಕೆ ಮೌಲ್ಯಕ್ಕೆ ನಿಗದಿಗೊಳಿಸಿ ಶುಲ್ಕ ಪಾವತಿಸಬೇಕು. ಆದರೆ, ಉಪನೊಂದಾವಣಾಧಿಕಾರಿಗಳು ಶೇ.300ರಷ್ಟು ಹೆಚ್ಚಿಸಿ ಕಟ್ಟಲೇಬೇಕೆಂದು ತಾಕೀತು ಮಾಡಿತ್ತಿದ್ದಾರೆ. ಒಂದು ಹಂತದಲ್ಲಿ ಕ್ರಯಕ್ಕಿಂತ ಶುಲ್ಕವೇ ಹೆಚ್ಚಾಗಿದೆ. ಬಡಕುಟುಂಬಗಳು ಹಾಗೂ ಮಧ್ಯಮ ವರ್ಗದ ಜನರು ನೊಂದಾವಣೆ ಶುಲ್ಕವನ್ನು ಪಾವತಿಸಲು ಸಾಧ್ಯವೇ ಇಲ್ಲವಾಗಿದೆ. ಆದ್ದರಿಂದ ಈ ಬಗ್ಗೆ ಸೂಕ್ತ ನಿರ್ದೇಶನನೀಡಬೇಕೆಂದು ತಹಶೀಲ್ದಾರ್‌ಗೆ ನೀಡಿದ ಮನವಿಯಲ್ಲಿ ಕೋರಿದರು.

ತಹಶೀಲ್ದಾರ್ ರೇಹಾನ್ ಪಾಷ ಮನವಿ ಸ್ವೀಕರಿಸಿ ಮಾತನಾಡಿ, ಉಪನೊಂದಾವಣಾಧಿಕಾರಿ ಕರೆಸಿ ಸರ್ಕಾರದ ನಿಯಮಗಳ ಅನುಸಾರವೇ ಶುಲ್ಕವನ್ನು ಪಡೆಯಬೇಕು. ಈ ಬಗ್ಗೆ ಜಿಲ್ಲಾ ನೊಂದಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಿಗೆ ಪತ್ರದ ಮೂಲಕ ಮನವಿ ಮಾಡಿದ್ದೇನೆ. ಸಾರ್ವಜನಿಕರ ಹಿತದೃಷ್ಠಿಯಿಂದ ಶೇ.30ರ ಶುಲ್ಕವನ್ನು ಶೇ.40ಕ್ಕೆ ಹೆಚ್ಚಿಸಿ ಶುಲ್ಕ ಪಡೆಯುವಂತೆ ಸಲಹೆ ನೀಡಿದರು.



**ಇದು ಹಿಂದು–ಮುಸ್ಲಿಮ್ ಎಂದಾಗದೆ ಭಾರತೀಯ ಹಬ್ಬವಾಗಲಿ ಎಂದು ಮನವಿ ಮಾಡಿಕೊಳ್ಳುತ್ತಾ......**

# ಗೌರಿ ಗಣೇಶ ಹಬ್ಬ ಸಂಭ್ರಮದ ಸಾಂಸ್ಕೃತಿಕ ಉತ್ಸವವಾಗಲಿ

## ಅದು ಕೋಮು ದ್ವೇಷದ ಗಲಭೆಕೋರರ ಮನಸ್ಥಿತಿ ಆಗದಿರಲಿ......

ಕೋವಿಡ್ ಸಾಂಕ್ರಾಮಿಕ ರೋಗದ ನಂತರ ಒಂದಷ್ಟು ಮುಕ್ತ ವಾತಾವರಣದಲ್ಲಿ ಗಣೇಶನ ಹಬ್ಬ ಆಚರಿಸಲು ಸಿದ್ಧತೆಗಳು ನಡೆದಿವೆ. ಜೊತೆಗೆ ರಾಜ್ಯದ ರಾಜಕೀಯದ ಚುನಾವಣಾ ವರ್ಷ ಸಹ ಮುಂದಿದೆ.

ಸಾಮಾನ್ಯವಾಗಿ ಗಣೇಶ ಹಬ್ಬವು ವೈಯಕ್ತಿಕತೆಯ ಜೊತೆಗೆ ಅನೇಕ ಸಂಘ ಸಂಸ್ಥೆಗಳು ಗುಂಪು ಗುಂಪಾಗಿ ಸಾರ್ವಜನಿಕ ಸ್ಥಳಗಳಲ್ಲಿ ಒಂದು ಉತ್ಸವವಾಗಿ ಆಚರಿಸಲ್ಪಡುತ್ತದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ಇದು ರಾಜಕೀಯ ಕಾರಣದಿಂದಾಗಿ ಒಂದು ಪ್ರಕ್ಷುಬ್ಧ ವಾತಾವರಣ ನಿರ್ಮಾಣ ಮಾಡಿದೆ.

ಎರಡು ಬಹುಮುಖ್ಯ ಕಾರಣಗಳಿಗಾಗಿ ಈ ಸಂದರ್ಭದಲ್ಲಿ ಘರ್ಷಣೆ ಉಂಟಾಗುವ ಸಾಧ್ಯತೆ ಇದೆ. ಗಣೇಶನನ್ನು ಪ್ರತಿಷ್ಠಾಪಿಸುವ ಜಾಗ ಮತ್ತು ಮೆರವಣಿಗೆಯ ಹಾದಿ ಇಲ್ಲಿ ಪರಿಸ್ಥಿತಿಯನ್ನು ಉದ್ವಿಗ್ನಗೊಳಿಸುತ್ತದೆ. ಮುಖ್ಯವಾಗಿ ಹಿಂದೂ ಮುಸ್ಲಿಮರ ನಡುವೆ....

ವಿಶ್ವದ ಬೃಹತ್ ಭೌಗೋಳಿಕ ಪ್ರದೇಶ ಹೊಂದಿರುವ ದೇಶಗಳಲ್ಲಿ ಭಾರತವೂ ಒಂದು. ಬಹುಶಃ ಏಳನೆಯ ಸ್ಥಾನ ಇರಬೇಕು. ಒಂದು ಸಣ್ಣ ಗಣೇಶ ಮೂರ್ತಿಯನ್ನು ಎಲ್ಲಿ ಬೇಕಾದರೂ ತಾತ್ಕಾಲಿಕವಾಗಿ ಪ್ರತಿಷ್ಠಾಪಿಸಿ ಕೆಲವು ದಿನಗಳಲ್ಲಿ ವಿಸರ್ಜಿಸಬಹುದು. ಆದರೆ ಕೆಲವು ಮೂಲಭೂತವಾದಿ ಮನಸ್ಥಿತಿಗಳು ಬೇಕಂತಲೇ ಉದ್ದೇಶಪೂರ್ವಕವಾಗಿ ಇಂತಹ ಸ್ಥಳದಲ್ಲಿಯೇ ಆಗಬೇಕು ಎಂದು ಹಠ ಮಾಡುತ್ತಾರೆ. ಅದರ ಹಿಂದೆ ರಾಜಕೀಯ ಮತ್ತು ಶ್ರೇಷ್ಠತೆಯ ವ್ಯಸನ ಇದ್ದೇ ಇರುತ್ತದೆ. ಅದನ್ನು ವಿರೋಧಿಸಲು ಇನ್ನೊಂದು ಅದೇ ರೀತಿಯ ಮನಸ್ಥಿತಿ ಸಿದ್ದವಾಗಿರುತ್ತದೆ. ಅಲ್ಲಿಗೆ ಘರ್ಷಣೆ ನಿಶ್ಚಿತ.

ಯಾರಾದರೊಬ್ಬರು ಹಠ ಮಾಡದೆ ಇದು ನಮ್ಮ ದೇಶ ಇಲ್ಲಿರುವವರು ನಮ್ಮ ಜನ ಆದ್ದರಿಂದ ಯಾವುದೇ ವಿವಾದವಿಲ್ಲದ ಒಂದು ಖಾಲಿ ಇರುವ ಪ್ರದೇಶದಲ್ಲಿ ಮಾಡೋಣ ಏಕೆಂದರೆ ದೇಶದ ಪ್ರಗತಿಗೆ ಶಾಂತಿ ಬಹಳ ಮುಖ್ಯ ಎಂಬ ಹೊಂದಾಣಿಕೆ ಮನೋಭಾವ ಪ್ರದರ್ಶಿಸಿದರೆ ಜಾಗದ ವಿಷಯದಲ್ಲಿ ವಿವಾದವೇ ಇರುವುದಿಲ್ಲ. ಆದರೆ ವಿಧ್ವಂಸಕ ಮತ್ತು ವಿಭಜನಾತ್ಮಕ ಮನಸ್ಸುಗಳಿಗೆ ಇದು ಬೇಡವಾಗಿದೆ. ಇಲ್ಲಿಯೇ ಮಾಡಬೇಕು ಎಂದು ಒಬ್ಬರು, ಇಲ್ಲ ಇಲ್ಲಿ ಮಾಡಲು ಬಿಡುವುದಿಲ್ಲ ಎಂದು ಇನ್ನೊಬ್ಬರು. ಅದಕ್ಕಾಗಿ ಪೋಲಿಸು ನ್ಯಾಯಾಲಯ ಹೊಡೆದಾಟ ಬಂದ್ ಎಲ್ಲಾ ಆಗಬೇಕು. ಹೊಸ ಹೊಸ ಪುಡಾರಿಗಳು ಸೃಷ್ಟಿಯಾಗಬೇಕು. ಮಾಧ್ಯಮಗಳಲ್ಲಿ ದಿನಗಟ್ಟಲೆ ಚರ್ಚೆ ಆಗಬೇಕು. ಒಟ್ಟಿನಲ್ಲಿ ದೇವರು ಧರ್ಮದ ಹೆಸರಿನಲ್ಲಿ ಒಂದಷ್ಟು ಜನ ಸಾಯಬೇಕು. ಆಗ ಕೆಲವರಿಗೆ ಸಮಾಧಾನ. ಇವರುಗಳಿಗೆ ದೇಶ ಹಾಳಾದರೂ ಚಿಂತೆ ಇಲ್ಲ. ಅವರು ಗೆಲ್ಲಬೇಕಷ್ಟೆ.

ಗಲಭೆಗಳ ಇನ್ನೊಂದು ಕಾರಣ ಮೆರವಣಿಗೆಯ ಹಾದಿ. ಮುಸ್ಲಿಮರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿಯೇ ಮೆರವಣಿಗೆ ಮಾಡಬೇಕು. ಅದು ನಮ್ಮ ಭೂಮಿ ನಮಗೆ ಅಷ್ಟೂ ಸ್ವಾತಂತ್ರ್ಯವಿಲ್ಲವೇ ಎಂದು ಹಿಂದುಗಳೂ, ಅಯ್ಯೋ ಮೆರವಣಿಗೆ ಮಾಡಲು ಇನ್ನೂ ಸಾಕಷ್ಟು ಇತರೆ ಮಾರ್ಗಗಳು ಇರುವಾಗ ಇವರೇಕೆ ಉದ್ದೇಶಪೂರ್ವಕವಾಗಿ ನಮ್ಮನ್ನು ಅಣಕಿಸಲು ಇದೇ ದಾರಿಯನ್ನುಆಯ್ಕೆಮಾಡಿಕೊಳ್ಳುತ್ತಾರೆ ಎಂದು ಮುಸ್ಲಿಮರೂ ಘರ್ಷಣೆಗೆ ಇಳಿಯುತ್ತಾರೆ. ಆಗ ಇನ್ಯಾರೋ ಎರಡೂ ಗುಂಪಿನ ಕಿಡಿಗೇಡಿಗಳು ಕಲ್ಲು ತೂರುತ್ತಾರೆ. ಅದು ಇನ್ನಷ್ಟು ಹಿಂಸೆಗೆ ತಿರುಗಿ ಒಂದೆರಡು ಹೆಣ ಬೀಳುತ್ತದೆ. ಅದಕ್ಕೆ ಒಂದಷ್ಟು ತನಿಖೆ, ಬಂದ್, ವ್ಯಾಪಾರ ನಷ್ಟ, ಶಾಲೆಗೆ ರಜಾ, ಪರಿಹಾರ ಘೋಷಣೆ. ರಾಜ್ಯದ ಬೊಕ್ಕಸಕ್ಕೆ ಹೊರೆ.

ನೋಡಿ ಹೇಗೆ ಒಂದು ಸಂಭ್ರಮದ ಹಬ್ಬ ಸೂತಕವಾಗಿ ಬದಲಾಗುತ್ತದೆ.

ಹಾಗಾದರೆ ಈ ದೇಶ ಯಾರದು ? ಇದನ್ನು ಯಾರು ರಕ್ಷಿಸಬೇಕು ? ಯಾರು ನಿಜವಾದ ಭಾರತೀಯರು ?...

ಯಾರು ದೇಶದ ಶಾಂತಿ ಮತ್ತು ಆ ಮೂಲಕ ಅಭಿವೃದ್ಧಿಗಾಗಿ ಸೋಲುತ್ತಾರೋ, ಸಹಿಸುತ್ತಾರೋ, ಹೊಂದಾಣಿಕೆ ಮಾಡಿಕೊಳ್ಳುತ್ತಾರೋ, ಸಮನ್ವಯ ಸಾಧಿಸುತ್ತಾರೋ, ತ್ಯಾಗ ಮಾಡುತ್ತಾರೋ, ಕರುಣೆ ತೋರುತ್ತಾರೋ ಯಾರು ಕ್ಷಮಿಸುತ್ತಾರೋ ಅವರೇ ನಿಜವಾದ ದೇಶ ಭಕ್ತರು, ಧರ್ಮ ಪರಿಪಾಲಕರು,

ಯಾರು ಅನಾವಶ್ಯಕವಾಗಿ ಘರ್ಷಣೆಗೆ ಇಳಿಯುತ್ತಾರೋ, ಯಾರು ದೇಶದ ಶಾಂತಿ ಮತ್ತು ಅಭಿವೃದ್ಧಿಗೆ ಕಂಟಕವಾಗುತ್ತಾರೋ ಅವರು ದೇಶದ್ರೋಹಿಗಳು.

ಇದರಲ್ಲಿ ಹಿಂದೂ ಮುಸ್ಲಿಂ ಇರುವುದಿಲ್ಲ. ಕೇವಲ ದೇಶ ಪ್ರೇಮಿಗಳು ಮತ್ತು ದೇಶ ವಿರೋಧಿಗಳು ಮಾತ್ರ ಇರುತ್ತಾರೆ.

ಮುಸ್ಲಿಮರೇ ದಯವಿಟ್ಟು ಯಾವುದೇ ವಿವಾದಗಳಿಗೆ ಆಸ್ಪದ ಕೊಡದೆ ಈ ಹಬ್ಬದಲ್ಲಿ ನೀವು ಸಹ ಭಾಗವಹಿಸಿ. ಇದು ನಿಮ್ಮ ದೇಶ. ಕೆಲವೇ ಕೆಲವು ಹಿಂದೂ ಮೂಲಭೂತವಾದಿಗಳ ಪ್ರಚೋದನೆಗೆ ಒಳಗಾಗಬೇಡಿ....


ಹಿಂದೂಗಳೇ ದಯವಿಟ್ಟು ಮುಸ್ಲಿಮರಿಗೆ ಅನಾವಶ್ಯಕವಾಗಿ ಪ್ರಚೋದಿಸದೇ ಅವರನ್ನು ಸಹ ಪ್ರೀತಿಯಿಂದ ಈ ಹಬ್ಬದಲ್ಲಿ ಭಾಗವಹಿಸುವಂತೆ ಆಹ್ವಾನಿಸಿ. ಇದು ನಿಮ್ಮ ದೇಶ.

ಒಳ್ಳೆಯತನ ಎಂಬುದು ಒಂದು ಘೋಷಣೆಯಲ್ಲ ಅಥವಾ ಪದವಲ್ಲ.

ಅದು ನಮ್ಮ ನಡವಳಿಕೆ. ಅದೇ ದೇಶ ಪ್ರೇಮ – ಅದೇ ಮಾನವೀಯ ಧರ್ಮ....

ಉಳಿದದ್ದು ನಿಮ್ಮ ವಿವೇಚನೆಗೆ ಸೇರಿದ್ದು...

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,



■ ಲೇಖನ
ವಿವೇಕಾನಂದ. ಹೆಚ್.ಕೆ.
9844013068





Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T